# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 142 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 18–12–2023 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 | Issue - 142 | Title- Code: KARKAN 28269 | Chitradurga | Date: 18-12-2023 Monday | Page: 4 | Price: Rs. 2-00


**ಶುಭ ನುಡಿ**

ಮನುಷ್ಯರು ಕಲಿಯಲು ಬಯಸಿದರೆ,
ಅವರ ಪ್ರತಿಯೊಂದು
ತಪ್ಪುಗಳು,ಒಂದೊಂದು ಶಿಕ್ಷಣ ಕೊಡುತ್ತವೆ
ತಪ್ಪಿನಿಂದ ಪಾಠ ಕಲಿತು,ತನ್ನ ಗುರಿ
ಮುಟ್ಟುವುದೇ ಸಾಧಕನ ಕೆಲಸ ...

» ಶುಭೋದಯ


**ಒಳಪುಟದ ಸುದ್ದಿಗಳು**

ಇಂದಿರಾ ಕ್ಯಾಂಟೀನ್‌ಗೆ ಜಿಲ್ಲಾಧಿಕಾರಿ ಭೇಟಿ: ಗುಣಮಟ್ಟ ಕಾಯ್ದುಕೊಳ್ಳಲು ತಾಕೀತು 2

ಬೆಳಗಾವಿಯಲ್ಲಿ ಮಹಿಳೆ ಮೇಲೆ ದೌರ್ಜನ್ಯ: ಬಿಜೆಪಿ ಪ್ರತಿಭಟನೆ 3

ತುರುವನೂರು ಗ್ರಾಮದಲ್ಲಿ ವಿಶಾಲವಾದ ರಸ್ತೆ ನಿರ್ಮಾಣ: ಶಾಸಕ ಟಿ.ರಘುಮೂರ್ತಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಕಿರಾಣಿ ಅಂಗಡಿ ಮೇಲೆ ದಾಳಿ, 10110 ಮೌಲ್ಯದ ಮದ್ಯ ವಶ

» ದಾವಣಗೆರೆ

ಜಗಳೂರು ತಾಲ್ಲೂಕಿನ ಸಿದ್ದಮ್ಮನಹಳ್ಳಿ ಗ್ರಾಮದ ಮಂಜುನಾಥ್ ಎಂಬ ವ್ಯಕ್ತಿಗೆ ಸೇರಿದ ಕಿರಾಣಿ ಅಂಗಡಿ ಮೇಲೆ ಹರಿಹರ ವಲಯ ಹಾಗೂ ದಾವಣಗೆರೆ ವಲಯ 1 ಮತ್ತು 2ರ ಅಧಿಕಾರಿ ಹಾಗೂ ಸಿಬ್ಬಂದಿಗಳು ದಾಳಿ ನಡೆಸಿ ರೂ.10,110 ಮೌಲ್ಯದ ಅಕ್ರಮ ಮಾರಾಟದ ಮದ್ಯ ವಶಪಡಿಸಿಕೊಳ್ಳಲಾಗಿದೆ. ಜಿಲ್ಲಾ ಅಬಕಾರಿ ಉಪಾಯುಕ್ತರ ನೇತೃತ್ವದಲ್ಲಿ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಲಾಗಿ, ಒಂದು ಲೀಟರ್ ಸಾಮರ್ಥ್ಯದ 76 ನೀರಿನ ಬಾಟಲಿಗಳಲ್ಲಿ 76 ಲೀಟರ್ ಸೇಂದಿ, ಒರಿಜಿನಲ್ ಚಾಯ್ಸ್ ವಿಸ್ಕಿಯ 90 ಮಿಲಿಯ 48 ಟೆಟ್ರೋಪ್ಯಾಕೆಟ್ ಮತ್ತು 500 ಮಿಲಿಯ ಪವರ್ ಕೂಲ್ 6 ಟಿನ್‌ಗಳನ್ನು ಇಲಾಖಾ ವಶಕ್ಕೆ ಪಡೆದು ಆರೋಪಿಯಾದ ಮಂಜುನಾಥ್‌ನ್ನು ನೋಟೀಸ್ ನೀಡಿ ಬಿಡುಗಡೆಗೊಳಿಸಲಾಗಿದೆ ಎಂದು ಜಿಲ್ಲಾ ಅಬಕಾರಿ ಉಪಾಯುಕ್ತರಾದ ಸ್ವಪ್ನ ಆರ್.ಎಸ್ ತಿಳಿಸಿದ್ದಾರೆ.

### ಸಾವರಿನ್ ಗೋಲ್ಡ್ ಬಾಂಡ್ ಹೂಡಿಕೆ ಸೇವೆ

» ದಾವಣಗೆರೆ

ಕೇಂದ್ರ ಸರ್ಕಾರದ ಪರವಾಗಿ ಖಃಖ ನೀಡುವ ಸಾವರಿನ್ ಗೋಲ್ಡ್ ಬಾಂಡ್ ಹೂಡಿಕೆ ಯೋಜನೆಯು ಭದ್ರತೆಯನ್ನು ಖಾತ್ರಿಪಡಿಸುವುದು ಮಾತ್ರವಲ್ಲದೇ ಲಾಭದಾಯಕ ಆದಾಯ ಗಳಿಸಲು ಸಹಕಾರಿಯಾಗಿದ್ದು, ಸಾರ್ವಜನಿಕರು ಹೂಡಿಕೆ ಮಾಡಲು ಡಿ. 18 ರಿಂದ 22 ರವರೆಗೆ ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಚೇರಿ ಅಥವಾ ಜಿಲ್ಲಾ ಪ್ರಧಾನ ಅಂಚೆ ಕಚೇರಿ ಮಾರುಕಟ್ಟೆ ಅಧಿಕಾರಿ ಸಂತೋಷ್.ಬಿ (ಮೊ.ಸಂ. 8861126883) ಸಂಪರ್ಕಿಸಲು ಜಿಲ್ಲಾ ಅಂಚೆ ಅಧೀಕ್ಷಕರು ತಿಳಿಸಿದ್ದಾರೆ.

### ಡಿಪ್ಲೊಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿ

» ದಾವಣಗೆರೆ

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿ ಸಂಸ್ಥೆಗಳಿಂದ ಜನವರಿ ಮಾಹೆಯಲ್ಲಿ ಪ್ರಾರಂಭವಾಗಲಿರುವ 6 ತಿಂಗಳ ಅವಧಿಯ ದೂರಶಿಕ್ಷಣ ಡಿಪ್ಲೊಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಗಾಗಿ ಸಹಕಾರ ಸಂಘ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ತರಬೇತಿ ಹೊಂದದ ಸಿಬ್ಬಂದಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ರಾಜ್ಯದ ಬೆಂಗಳೂರು, ಮೈಸೂರು, ಮಡಿಕೇರಿ, ಮೂಡಬಿದ್ರೆ, ಶಿವಮೊಗ್ಗ, ಧಾರವಾಡ, ಬೆಳಗಾವಿ ಹಾಗೂ ಕಲಬುರಗಿ ಸ್ಥಳಗಳಲ್ಲಿ ತರಬೇತಿ ನೀಡಲಾಗುವುದು. ತರಬೇತಿಯನ್ನು ಪಡೆಯಲಿಚ್ಚಿಸುವ ಅಭ್ಯರ್ಥಿಗಳು ಸಹಕಾರ ಸಂಘ, ಸಹಕಾರ ಇಲಾಖೆ ಅಥವಾ ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ವೇತನ ಪಡೆಯುವ ನೌಕರರಾಗಿರಬೇಕು. ಖಾಸಗಿ ಅಭ್ಯರ್ಥಿಗಳಿಗೆ ನಿಯಮಿತವಾಗಿ ಅವಕಾಶವನ್ನು ಕಲ್ಪಿಸಲಾಗಿದೆ.

ವಯೋಮಿತಿ 16 ವರ್ಷ ಮೇಲ್ಪಟ್ಟವರು ಅರ್ಜಿ ಸಲ್ಲಿಸಬಹುದು. ತರಬೇತಿಯಲ್ಲಿ ಸಂಘ, ಸಂಸ್ಥೆಯಿಂದ ಬರುವ ಅಭ್ಯರ್ಥಿಗಳಿಗೆ ಮಾಹೆಯಾನ ರೂ. 400 ಗಳ ಶಿಷ್ಯವೇತನವನ್ನು ನೀಡಲಾಗುವುದು. ಅರ್ಜಿ ಸಲ್ಲಿಸಲು ಡಿ. 31 ಕೊನೆಯ ದಿನವಾಗಿರುತ್ತದೆ.ಆಸಕ್ತರು ಡಿ. 31 ರೊಳಗಾಗಿ ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ., #2532, ಕಲಾಪ್ರಕಾಶ ವೃಂದ, 1ನೇ ಮಹಡಿ, ವಿನೋಬನಗರ 2ನೇ ಮುಖ್ಯರಸ್ತೆ, ಎಂ.ಸಿ.ಸಿ 'ಎ' ಬ್ಲಾಕ್, ದಾವಣಗೆರೆ (ದೂ.ಸಂ. 08192–237672) ಈ ಸಂಸ್ಥೆಯಿಂದ ಶುಲ್ಕ ರೂ. 100 ಗಳನ್ನು ನಗದು ಅಥವಾ ಅಂಚೆ ಮೂಲಕ ರೂ. 125 ಗಳ ಡಿ.ಡಿ. ಪಾವತಿಸಿ ತರಬೇತಿಯ ಅರ್ಜಿ ಫಾರಂ ಮತ್ತು ವಿವರಣಾ ಪುಸ್ತಕವನ್ನು ಪಡೆದು ಭರ್ತಿ ಮಾಡಿ ಆಯಾ ತರಬೇತಿ ಸಂಸ್ಥೆಯ ಪ್ರಾಂಶುಪಾಲರಿಗೆ ಸಲ್ಲಿಸಬೇಕು ಎಂದು ಜಿಲ್ಲಾ ಸಹಕಾರ ಒಕ್ಕೂಟ ನಿಗಮದ ಮುಖ್ಯಕಾರ್ಯನಿರ್ವಹಣಾಧಿಕಾರಿ ಮಂಗಳಗೌಡ ದಾನಪ್ಪಗೌಡ್ರ ತಿಳಿಸಿದ್ದಾರೆ.

# ಪತ್ರಕರ್ತರು ಸಮಾಜವನ್ನು ತಿದ್ದುವ ಗುರುವಿದ್ದಂತೆ: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ

ಸರ್ಕಾರದ ಆಡಳಿತ ಮತ್ತು ಜನರ ನಡುವೆ ಸ್ನೇಹಸೇತುವೆಯಾಗಿ ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸುವ ಪತ್ರಕರ್ತರ ಕಾರ್ಯ ಶ್ಲಾಘನೀಯ. ತಮ್ಮ ಎಲ್ಲಾ ತೊಂದರೆಗಳನ್ನು ಬದಿಗೊತ್ತಿ ಸಮಾಜದ ಹಿತಕ್ಕಾಗಿ ನಿರಂತರ ಶ್ರಮಿಸುವ ಪತ್ರಿಕಾ ವೃತ್ತಿಯ ಗೌರವ, ಘನತೆಯನ್ನು ಗೌರವಿಸುವ ಕೆಲಸ ಎಲ್ಲರಿಂದ ಆಗಬೇಕೆಂದು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘ ಹಮ್ಮಿಕೊಂಡಿದ್ದ ಪತ್ರಿಕಾದಿನಾಚರಣೆ ಮತ್ತು ಕನ್ನಡ ರಾಜ್ಯೋತ್ಸವ ದಿನಾಚರಣೆಯನ್ನು ಗಿಡಕ್ಕೆ ನೀರುಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಕಳೆದ ಹಲವಾರು ವರ್ಷಗಳಿಂದ ಪತ್ರಕರ್ತರ ಸಮಸ್ಯೆಗಳನ್ನು ಹತ್ತಿರದಿಂದ ನೋಡಿ ಸಾಧ್ಯವಾದಷ್ಟು ಮಟ್ಟಿಗೆ ನಾನು ಅವುಗಳ ಪರಿಹಾರಕ್ಕೆ ಪ್ರಾಮಾಣಿಕ ಪ್ರಯತ್ನ ನಡೆಸಿದ್ದೇನೆ. ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್, ಯಾವುದೇ ತಾರತಮ್ಯವಿಲ್ಲದೆ ಸ್ಥಳೀಯ ಹಾಗೂ ರಾಜ್ಯಮಟ್ಟದ ಪತ್ರಿಕೆಗಳಿಗೆ ಸರ್ಕಾರದ ಜಾಹೀರಾತು, ಸ್ಥಳೀಯ ಪತ್ರಕರ್ತರಿಗೆ ನಿವೇಶನ, ಮನೆ ಮುಂತಾದ ಸಮಸ್ಯೆಗಳನ್ನು ಪರಿಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆಲ್ಲದೆ, ಮುಖ್ಯಮಂತ್ರಿಗಳ ಮೇಲು ಒತ್ತಡ ಹೇರುವ ಭರವಸೆ ನೀಡಿದರು.

ನಮ್ಮದೇಸರ್ಕಾರರಾಜ್ಯದಲ್ಲಿಆಡಳಿತದಲ್ಲಿ ಇದ್ದು ಪತ್ರಕರ್ತರ ಸಮಸ್ಯೆಗಳಿಗೆ ನಾನು ಸಹ ಸೇತುವೆ ಆಗಿ ಕೆಲಸ ಮಾಡುತ್ತೇನೆ. ನನ್ನ ಗಮನಕ್ಕೆ ಬಂದಂತಹ ಎಲ್ಲಾ ವನ್ನು ನನ್ನ ಹಂತದಲ್ಲಿ ಸರಿ ಮಾಡುವ ಕೆಲಸವನ್ನು ನಿರಂತರವಾಗಿ ಮಾಡುತ್ತಿದ್ದೇನೆ. ಮುಂದೆ ಸಹ ಎಲ್ಲಾರ ಜೊತೆ ಏನೇ ಸಮಸ್ಯೆ ಬಂದರು ಜೊತೆಯಾಗಿ ನಿಲ್ಲುತ್ತೇನೆ ಎಂದು ತಿಳಿಸಿದರು.




> ಪತ್ರಕರ್ತರ ವೃತ್ತಿ ಅತ್ಯಂತ ಪವಿತ್ರವಾದದ್ದು, ಜನ ಮತ್ತು ಸಮಾಜದ ಹಿತವನ್ನು ಕಾಪಾಡುವ ಹೊಣೆಗಾರಿಕೆ ಹೊತ್ತ ಪತ್ರಕರ್ತರ ಕಾರ್ಯ ವಿಶೇಷತೆಯಿಂದ ಕೂಡಿದೆ . ವೃತ್ತಿಯ ಘನತೆ ಮತ್ತು ಮೌಲ್ಯವನ್ನು ಎತ್ತಿಹಿಡಿಯಲು ಪತ್ರಕರ್ತರು ಮುಂದಾಗಬೇಕು.
>
> » **ಟಿ.ರಘುಮೂರ್ತಿ ಶಾಸಕರು ಚಳ್ಳಕೆರೆ ವಿಧಾನ ಸಭಾ ಕ್ಷೇತ್ರ**

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಕಾರ್ಯನಿರತ ಪತ್ರಕರ್ತ ಸಂಘದ ಅಧ್ಯಕ್ಷ ದಿನೇಶ್‌ಗೌಡಗೆರೆ, ಪತ್ರಕರ್ತರು ಒಂದೇ ಕುಟುಂಬದ ಸದಸ್ಯರು ಅಲ್ಪಸ್ವಲ್ಪ ಬೇದಭಾವವಿದ್ದರೂ ವೃತ್ತಿ ನಿರ್ವಹಣೆ ವಿಚಾರದಲ್ಲಿ ಯಾರಲ್ಲೂ ತಾರತಮ್ಯವಿಲ್ಲ. ಡಿ.ವಿ.ಗುಂಡಪ್ಪನವರು ಸ್ಥಾಪಿಸಿದ ಕಾರ್ಯನಿರತರ ಪತ್ರಕರ್ತರ ಸಂಘ 92ರ ವರ್ಷಕ್ಕೆ ಕಾಲಿಟ್ಟಿದೆ. ಆದರೂ ರಾಜ್ಯ ಸರ್ಕಾರ ಗ್ರಾಮೀಣ ಭಾಗದ ಪತ್ರಕರ್ತರ ಸಮಸ್ಯೆಗಳಿಗೆ ಪರಿಹಾರ ನೀಡುವ ನಿಟ್ಟಿನಲ್ಲಿ ತೃಪ್ತಿಕಾರವಾದ ಕಾರ್ಯನಿರ್ವಹಿಸಿಲ್ಲ. ಶಾಸಕರು ಈ ಬಗ್ಗೆ ಸರ್ಕಾರದೊಂದಿಗೆ ಚರ್ಚಿಸುವಂತೆ ಮನವಿ ಮಾಡಿದರು.

ತಾಲ್ಲೂಕು ಪತ್ರಿಕಾ ಸಂಘದ ಉಪಾಧ್ಯಕ್ಷ ಕರ್ಲಕುಂಟೆತಿಪ್ಪೇಸ್ವಾಮಿ ಎಲ್ಲರನ್ನೂಸ್ವಾಗತಿಸಿ, ಸ್ಥಳೀಯ ಪತ್ರಕರ್ತರ ಬಗ್ಗೆ ಹಾಗೂ ಅವರ ಕಾರ್ಯದ ಬಗ್ಗೆ ಶಾಸಕರಿಗೆ ಅಪಾರವಾದ ಗೌರವವಿದೆ. ಎಲ್ಲಾ ಪತ್ರಕರ್ತರನ್ನು ಗೌರವಿಸುವ ಗುಣ ಅವರಲ್ಲಿದೆ. ನಮ್ಮ ಬೇಡಿಕೆಗಳನ್ನು ಈಡೇರಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಬೇಕೆಂದು ಎಲ್ಲಾ ಪತ್ರಕರ್ತರ ಪರವಾಗಿ ಮನವಿ ಮಾಡುವೆ ಎಂದರು.

ಭಾರತೀಯ ಕಾರ್ಯನಿರತ ಪತ್ರಕರ್ತರ ಸಂಘದ ರಾಷ್ಟ್ರೀಯ ಪರಿಷತ್ ಸದಸ್ಯ, ಜಿಲ್ಲಾ ವಾಲ್ಮೀಕಿ ಪ್ರಶಸ್ತಿ ಪುರಸ್ಕೃತರು, ಹಿರಿಯ ಪತ್ರಕರ್ತ ಎಂ.ಎನ್.ಅಹೋಬಲಪತಿ ಮಾತನಾಡಿ, ಪತ್ರಕರ್ತರ ಸಂಘವನ್ನು ಸಂಸ್ಥಾಪಿಸಿದ ಡಿ.ವಿ.ಗುಂಡಪ್ಪನವರ ಬಗ್ಗೆ ಎಲ್ಲರಿಗೂ ಅಪಾರ ಗೌರವವಿದೆ. ಆದರೆ, ಇದೇ ಸಂದರ್ಭದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಸಹ ಬಹಿಷ್ಕಾರ ಭಾರತ, ಸತ್ಯಾನ್ವೇಷಣೆ, ಮೂಕನಾಯಕ ಎಂಬ ಮೂರು ಪತ್ರಿಕೆಗಳನ್ನು ಪ್ರಕಟಿಸಿ ಅವುಗಳ ಮೂಲಕ ಜನರ ಜಾಗೃತಿ ಮೂಡಿಸಿದ್ದು, ಅವರ ಭಾವಚಿತ್ರಕ್ಕೂ ಅನುವು ಮಾಡಿಕೊಡುವಂತೆ ಮನವಿ ಮಾಡಿದರು.ಪತ್ರಕರ್ತರಿಗೆಸೌಲಭ್ಯನೀಡುವ ವಿಚಾರದಲ್ಲಿ ಕಡೆಪಕ್ಷ ಮಾಧ್ಯಮದಲ್ಲಿ 10 ವರ್ಷ ಸೇವೆ ಮಾಡಿದವರಿಗೆ ಆದ್ಯತೆ ನೀಡಬೇಕು ಎಂದರು.

ಮತ್ತೊರ್ವ ರಾಷ್ಟ್ರೀಯ ಮಂಡಳಿ ಸದಸ್ಯ ಸಿ. ಹೆಂಜಾರಪ್ಪ ಮಾತನಾಡಿ, ಸರ್ಕಾರ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಪತ್ರಿಕೆಗಳಿಗೆ ಮಾತ್ರ ವಿಶೇಷ ಜಾಹೀರಾತು ನೀಡುವುದನ್ನು ತಡೆಯಲಾಗಿದೆ. ಯಾವುದೇ ತಾರತಮ್ಯವಿಲ್ಲದೆ ರಾಜ್ಯ, ಪ್ರಾದೇಶಿಕ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಪತ್ರಿಕೆ ಸರ್ಕಾರದಿಂದ ಜಾಹೀರಾತು ಕಡೆಪಕ್ಷ ತಿಂಗಳಿಗೆ ಎರಡ್ಮೂರಾದರೂ ನೀಡಬೇಕೆಂದು ಮನವಿ ಮಾಡಿದರು.

ಕನ್ನಡ ರಾಜ್ಯೋತ್ಸವ ಪ್ರಶಸ್ತಿ ವಿಜೇತ ಪಿ.ತಿಪ್ಪೇಸ್ವಾಮಿ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿ, ಪತ್ರಕರ್ತರು ಪ್ರಾಮಾಣಿಕರು ಮತ್ತು ಸತ್ಯವನ್ನು ಪ್ರತಿಪಾದಿಸುವ ಮುಂಚೂಣಿ ಶಿಸ್ತಿನ ಸಿಪಾಯಿಗಳು. ಪೊಲೀಸರಂತೆ ಅವರೂ ಸಹ ಶ್ರಮವಹಿಸಿ ಕಾರ್ಯನಿರ್ವಹಿಸುತ್ತಾರೆ.

ಆದರೆ, ಸರ್ಕಾರ ಇವರ ಬಗ್ಗೆ ನಿರ್ಲಕ್ಷ್ಯ ವಹಿಸಿರುವುದು ಸರಿಯಲ್ಲವೆಂದರು. ಡಿವೈಎಸ್ಪಿ ಟಿ.ಬಿ.ರಾಜಣ್ಣ ಮಾತನಾಡಿ, ಪೊಲೀಸ್ ಮತ್ತು ಪತ್ರಕರ್ತರು ಸಮಾಜವನ್ನು ತಿದ್ದುವ, ಪರಿವರ್ತಿಸುವ ಗುರುತರಜವಾಬ್ದಾರಿಯನ್ನುನಿರ್ವಹಿಸುತ್ತಾ ಬಂದಿದ್ದಾರೆಂದರು.

ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಸಿದ್ದಯ್ಯನಕೋಟೆಯ ಬಸವಲಿಂಗ 'ಸ್ವಾಮೀಜಿ ವಹಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ಪತ್ರಕರ್ತ ಸಂಘದ ಅಧ್ಯಕ್ಷ ಟಿ.ಜೆ.ತಿಪ್ಪೇಸ್ವಾಮಿ ಮಾತನಾಡಿ, ಚಳ್ಳಕೆರೆ ಕ್ಷೇತ್ರದಲ್ಲಿ ಶಾಸಕರು ಅಭಿವೃದ್ಧಿ ಕಾರ್ಯಕ್ರಮದ ಮೂಲಕ ಖ್ಯಾತಿಯಾಗಿದ್ದಾರೆ.

ಅದೇ ರೀತಿ ಪತ್ರಕರ್ತರು ಕಳೆದ ಸುಮಾರು 30 ವರ್ಷಗಳಿಂದ ಯಾವುದೇ ಸೌಲಭ್ಯವಿಲ್ಲದೆ ಸೇವೆ ಸಲ್ಲಿಸುತ್ತಿದ್ದು, ಅವರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಶಾಸಕರು ರಾಜ್ಯಕ್ಕೆ ಮಾದರಿಯಾಗಬೇಕೆಂದರು.


ಕಾರ್ಯಕ್ರಮದಲ್ಲಿ ಡಾ.ಬಿ.ಚಂದ್ರನಾಯ್ಕ, ಪಿ.ತಿಪ್ಪೇಸ್ವಾಮಿ, ನಾವೆಲ್ಲಾ ಮಹೇಶ್, ಗೋಪನಹಳ್ಳಿ ಶಿವಣ್ಣ, ಅಪ್ಪುವೀರೇಶ್, ಲಕ್ಷ□□ಣ್‌ಪಾಳೇಗಾರ, ಜಿಲ್ಲಾ ಖಜಾಂಚಿ ಡಿ.ಕುಮಾರಸ್ವಾಮಿ, ಜೆ.ಮಂಜುನಾಥ, ಎಚ್.ಟಿ.ಮಂಜುನಾಥ ಮುಂತಾದವರು ಸನ್ಮಾನಿಸಿದರು. ರೈತ ಸಂಘದ ಹಿರಿಯ ಮುಖಂಡ ರೆಡ್ಡಿಹಳ್ಳಿವೀರಣ್ಣ, ಗ್ರಾಮ ಪಂಚಾಯಿತಿ ಅಧ್ಯಕ್ಷ ಆನಂದಕುಮಾರ್, ಪತ್ರಕರ್ತರಾದ ಬೊಮ್ಮಲಿಂಗಪ್ಪ, ರಾಮಾಂಜನೇಯ, ಬೆಳಗೆರೆ ಸುರೇಶ್, ಚಿದಾನಂದಮೂರ್ತಿ, ಗಂಗಾಧರ, ಜೆ.ತಿಮ್ಮಯ್ಯ, ಭಾರತಿಚಿತ್ತಯ್ಯ, ಎಸ್‌ಟಿಡಿ ರಾಜು, ಎಚ್.ಶಿವಮೂರ್ತಿ, ಕೆ.ಚಿತ್ತಯ್ಯ, ಬಿ.ಲೋಕೇಶ್ ಉಪಸ್ಥಿತರಿದ್ದರು.

## ಸಾಮಾನ್ಯ ಕಾರ್ಯ ಕರ್ತನಿಗೆ ಒಲಿಯುವುದೇ ಟಿಕೆಟ್?

» ನಾಯಕನಹಟ್ಟಿ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಮೀಸಲು ಕ್ಷೇತ್ರವಾಗಿದ್ದು ಈ ಬಾರಿ ಸಾಮಾನ್ಯ ಕಾರ್ಯಕರ್ತನಿಗೆ ಅವಕಾಶ ಮಾಡಿಕೊಡಿ ಎಂದು ಕೆಪಿಸಿಸಿ ರಾಜ್ಯ ಸಂಚಾಲಕರು ಪರಿಶಿಷ್ಟ ಜಾತಿ ವಿಭಾಗದ ಹಿರೇಹಳ್ಳಿ ಮಲ್ಲೇಶ್ ಸಮಾಜ ಕಲ್ಯಾಣ ಇಲಾಖೆ ಸಚಿವರು ಮತ್ತು ಲೋಕಸಭಾ ಕ್ಷೇತ್ರದ ವಿಕ್ಷಕರದ ಮಹದೇವಪ್ಪ ರ ಅವರಿಗೆ ಮನವಿ ಮಾಡಿಕೊಂಡರು.

ಕಾಂಗ್ರೆಸ್ ಪಕ್ಷದಲ್ಲೇ ನಿಷ್ಠಾವಂತನಾಗಿ ಸುಮಾರು 20 ವರ್ಷಗಳಿಂದ ಕಾಂಗ್ರೆಸ್ ಪಕ್ಷಕ್ಕೆ ದುಡಿದಿದ್ದೇನೆ. ಮತ್ತು ಕಾಂಗ್ರೆಸ್ ಪಕ್ಷದ



ಸಕ್ರಿಯ ಕಾರ್ಯಕರ್ತನಾಗಿ ವಿಧಾನಸಭಾ ಚುನಾವಣೆಯ ಶಿವಮೊಗ್ಗ ಉಸ್ತುವಾರಿಯಾಗಿ ಕೆಲಸ ಮಾಡಿದ್ದೇನೆಸುಮಾರು 20 ವರ್ಷಗಳಿಂದ ವಿಧಾನಸಭೆ, ಲೋಕಸಭೆ, ಜಿಲ್ಲಾ ಪಂಚಾಯಿತಿ ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯತಿ ಚುನಾವಣೆ, ನಗರ ಸಭೆ, ಪಟ್ಟಣ ಪಂಚಾಯಿತಿ, ಎಲ್ಲಾ ಚುನಾವಣೆಗಳ ಪಕ್ಷದ ಅಭ್ಯರ್ಥಿಗಳ ಪರ ಕೆಲಸ ಮಾಡಿ ಪಕ್ಷದ ಗೆಲುವಿಗೆ ಶ್ರಮ ವಹಿಸಿದ್ದೇನೆ, ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ 1,125 ಡಿಜಿಟಲ್ ಮೆಂಬರ್ ಶಿಪ್ ಮಾಡಿದ್ದೇನೆ.


ಪುಟ ↘ 3


## ಸಂಘ ಪರಿವಾರ ಸುಳ್ಳಿನ ಕಾರ್ಖಾನೆ: ಮುಖ್ಯಮಂತ್ರಿ ಸಿದ್ದರಾಮಯ್ಯ

ಗದಗ: ಸಂಘ ಪರಿವಾರದ ಎಬಿವಿಪಿ, ಬಜರಂಗ ದಳ, ಯುವ ಮೋರ್ಚಾ ಎಲ್ಲಾ ಸುಳ್ಳಿನ ಕಾರ್ಖಾನೆ ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ವಿದ್ಯಾರ್ಥಿಗಳಿಗೆ ಶಕ್ತಿ ಯೋಜನೆಯಿಂದ ತೊಂದರೆಯಾಗಿರುವ ಬಗ್ಗೆ ಮಾತನಾಡಿ ಎಬಿವಿಪಿ ಬಿಜೆಪಿಯ ವಿದ್ಯಾರ್ಥಿ ಸಂಘಟನೆಯಾಗಿದ್ದು, ಸುಳ್ಳು ಹೇಳುವುದೇ ಅವರ ಕೆಲಸ ಎಂದರು. ಭಾರತ ಉಳಿಯಬೇಕೆಂದರೆ ಹಿಂದೂ ರಾಷ್ಟವಾಗಬೇಕು ಎಂದು ಪೇಜಾವರ ಶ್ರೀಗಳು ಹೇಳಿಕೆ ನೀಡಿರುವ ಬಗ್ಗೆ ಮಾತನಾಡಿ ಅದು ಬಿಜೆಪಿಯ ಘೋಷವಾಕ್ಯ. ಹಿಂದೂ ರಾಷ್ಟ್ರ ವಾಗಬೇಕೆಂದು ಜನಸಂಘ 1950ರಲ್ಲಿ ಪ್ರಾರಂಭವಾದಾಗಲೇ ಹೇಳಿದರು. ನಮ್ಮ ದೇಶದಲ್ಲಿ ಬರೀ ಹಿಂದೂಗಳಲ್ಲಿ ಕ್ರಿಶ್ಚಿಯನ್ , ಮುಸ್ಲಿಂ, ಜೈನರು, ಭೌದ್ಧರು ಇದ್ದಾರೆ. ನಮ್ಮ ದೇಶ ಬಹುತ್ವದ ದೇಶ ಎಂದರು.

**ಪ್ರಮುಖ ಸುದ್ದಿ**

### ಚಿತ್ರದುರ್ಗ ಕಾಂಗ್ರೆಸ್ ಕಚೇರಿ ಮುಂದೆ ಕಾರ್ಯಕರ್ತರ ಜಮಾವಣೆ; ಸಂಚಾರ ಅಸ್ತವಸ್ತ

# ಶಕ್ತಿ ಪ್ರದರ್ಶನ ಮಾಡಿದ ಲೋಕ ಆಕಾಂಕ್ಷಿಗಳು

» ಚಿತ್ರದುರ್ಗ

ಮುಂದಿನ ವರ್ಷ ನಡೆಯಲಿರುವ ಲೋಕಸಭಾ ಚುನಾವಣೆಯ ಹಿನ್ನಲೆಯಲ್ಲಿ ಕಾಂಗ್ರೆಸ್ ಪಕ್ಷ ಉತ್ತಮ ಅಭ್ಯರ್ಥಿಗಳ ಆನ್ವೇಷಣೆಯಲ್ಲಿದೆ. ಈ ಹಿನ್ನಲೆಯಲ್ಲಿ ಇಂದು ನಗರದ ಕಾಂಗ್ರೆಸ್ ಕಚೇರಿಯ ಮುಂಬಾಗದಲ್ಲಿ ಸರ್ಕಾರದ ಸಮಾಜ ಕಲ್ಯಾಣ ಸಚಿವರು, ಚಿತ್ರದುರ್ಗ ಲೋಕಸಭಾ ಚುನಾವಣಾ ವೀಕ್ಷಕರಾದ ಡಾ.ಎಚ್.ಸಿ.ಮಹಾದೇವಪ್ಪ ಸಭೆಯನ್ನು ನಡೆಸಿದರು.

ಸಭೆಯ ಹಿನ್ನೆಲೆಯಲ್ಲಿ ನಗರದ ಒನಕೆ ಓಬವ್ವ ವೃತ್ತ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಿದ ತುಂಬಿದ್ದು.. ಲೋಕಸಭೆ ಟಿಕೇಟ್ ಆಕಾಂಕ್ಷಿಗಳು ತಮ್ಮ ಬೆಂಬಲಿಗರೊಂದಿಗೆ ಜೈಕಾರಗಳ ಮೂಲಕ ಸಭೆಗೆ ಆಗಮಿಸುತ್ತಿದ್ದುದು



ವಿಶೇಷವಾಗಿತ್ತು ಇದರಲ್ಲಿ ಕೆಲವರು ವಿವಿಧ ಜಾನಪದ ಕಲಾಮೇಳಗಳೊಂದಿಗೆ ಆಗಮಿಸಿದರೆ ಮತ್ತೆ ಕೆಲವರು ಪಟಾಕಿಯನ್ನು ಸಿಡಿಸುವುದರ ಮೂಲಕ ತಮ್ಮ ಬರವನ್ನು ತೋರಿಸಿಕೊಂಡರು. ಕೆಲವರು ಲೋಕಸಬಾ ಚುನಾವಣೆಯ ಹಿನ್ನಲೆಯಲ್ಲಿ ಕಾಂಗ್ರೆಸ್ ಕಚೇರಿ ಮುಂದೆ ಜನ ಹೆಚ್ಚು ಸೇರುತ್ತಿದ್ದರಿಂದ ಪೊಲೀಸರು ಬಿಗಿ ಭದ್ರತೆಯನ್ನು ಮಾಡಿದ್ದು, ಡಿಸಿ ಕಚೇರಿ ಕಡೆಗೆ ಬರುತ್ತಿರುವ ಎಲ್ಲಾ ಮಾರ್ಗಗಳಲ್ಲಿ ಬ್ಯಾರಿಕೇಡ್ ಅಳವಡಿಸಿ ವಾಹನ ತಡೆಯುತ್ತಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಮಹಾದೇವಪ್ಪ ಇಲ್ಲಿನಾನು ಆಕಾಂಕ್ಷಿಗಳಿಂದ ಅರ್ಜಿಗಳನ್ನು ಮಾತ್ರ ತೆಗೆದುಕೊಂಡು ಹೋಗಲು ಬಂದಿದ್ದೇನೆ ಇಲ್ಲಿಯ್ಯ ಟೀಕೇಟ್ ಸಿಗುತ್ತದೆ ಎಂಬ ಭ್ರಮೆ ಬೇಡ ಇಲ್ಲಿ ಆಕಾಂಕ್ಷಿಗಳ ಪಟ್ಟಿಯನ್ನು ಕೆಪಿಸಿಸಿಗೆ ತೆಗೆದುಕೊಂಡು ಹೋಗಿ ಅಲ್ಲಿ ತೀರ್ಮಾನ ಮಾಡಿ ನಂತರ ಪಕ್ಷದ ಹೈಕಮಾಂಡ್ ಬಳಿ ತೆಗೆದುಕೊಂಡು ಹೋಗಲಾಗುವುದು ಇಲ್ಲಿ ಎಲ್ಲರ ಅಭೀಪ್ರಾಯವನ್ನು ಸಹಾ ತೆಗೆದುಕೊಳ್ಳಲಾಗುವುದು ಬೇರೆ ಪಕ್ಷದವರಂತೆ ಎಲ್ಲೂ ಕುಳಿತು ಅಭ್ಯರ್ಥಿಗಳನ್ನು ನಮ್ಮ ಪಕ್ಷ ಆಯ್ಕೆ ಮಾಡುವುದಿಲ್ಲ ಆಕಾಂಕ್ಷಿಗಳಿಂದ ಅರ್ಜಿಯನ್ನು ಪಡೆದು ಸ್ಥಳಿಯ ಮುಖಂಡರು, ಶಾಸಕರು, ಪಕ್ಷದ ಮುಖಂಡರು, ಮಾಜಿ ಸಚಿವರು, ಪಕ್ಷ ಕಾರ್ಯಕರ್ತರಿಗೆ ಅಭೀಪ್ರಾಯಗಳನ್ನು ಪಡೆಯುವುದರ ಮೂಲಕ ಪಟ್ಟಿಯನ್ನು ತಯಾರು ಮಾಡಲಾಗುವುದು ಎಂದರು.

**ಡಜನ್‌ಗಿಂತಹೆಚ್ಚುಆಕಾಂಕ್ಷಿಗಳು:** ಚಿತ್ರದುರ್ಗ ಲೋಕಸಭಾ ಚುನಾವಣೆಯ ಹಿನ್ನಲೆಯಲ್ಲಿ ಇಂದು ಸಚಿವರಾದ ಮಹಾದೇವಪ್ಪ ರವರು ಚಿತ್ರದುರ್ಗಕ್ಕೆ ಆಗಮಿಸಿದಾಗ ಚುನಾವಣಾ ಆಕಾಂಕ್ಷಿಗಳಾಗಿ ಒಂದು ಡಜನ್ ಗಿಂತ ಹೆಚ್ಚು ಆಕಾಂಕ್ಷಿಗಳು ಮಹಾದೇವಪ್ಪರವರ ಮುಂದೆ ತಮ್ಮ ಹೆಸರುಗಳನ್ನು ತಿಳಿಸಿದರು.


ಪುಟ ↘ 3

## ಫಾಸ್ಟ್ ನ್ಯೂಸ್

### ಪ್ರತೀ ಜಿಲ್ಲೆಗೊಂದು ಕನ್ನಡ ಕಾಲೋನಿ ಉದಯಿಸಲಿ

» ದಾವಣಗೆರೆ

ಕನ್ನಡದ ನೆಲ, ಜಲ, ಸಂಸ್ಕೃತಿ, ಭಾಷೆಗೆ ಧಕ್ಕೆ ಬಂದಾಗ ಯಾವೊಬ್ಬ ಕೋಟ್ಯಾಧೀಶನು ಕನ್ನಡ ಬಾವುಟ ಹಿಡಿದು ಬೀದಿಗಿಳಿದು ಹೋರಾಟಗಳಲ್ಲಿ ಕೂಗುತ್ತಾ ಬರಲಾರ. ಕೆಲಸ ಬಿಟ್ಟು, ತನ್ನ ಸ್ವಂತ ಹಣ ಖರ್ಚು ಮಾಡಿಕೊಂಡು ಹೋರಾಟಕ್ಕೆ ಮುನ್ನುಗ್ಗಿ ಬರುವವನು ಮಾತ್ರ ಬಡವನಾಗಿರುತ್ತಾನೆ. ಅಲ್ಲದೇ ಪೋಲೀಸರಿಂದ ಲಾಠಿ ಏಟು ಜೈಲಿಗೆ ಹೋಗಿ ಬರಲು ಸಿದ್ಧನಾಗಿರುತ್ತಾನೆ. ಇವತ್ತು ಕನ್ನಡ ನಾಡಿಗೆ ಯಾವುದೇ ತರಹದ ತೊಂದರೆಯಾಗುವ ಸಂಭವ ಇದೆ ಎಂದು ಕಂಡು ಬಂದಲ್ಲಿ ಕಾವಲು ಕಾಯಲು ಬರುವವರು ನಮ್ಮ ಕನ್ನಡ ಪರ ಹೋರಾಟಗಾರರು ಮಾತ್ರ. ಈವರೆಗೂ ಆಯಾ ಜಿಲ್ಲೆಗಳಲ್ಲಿ ಬಾಡಿಗೆ ಮನೆಗಳಲ್ಲಿ ವಾಸಿಸುವ ಬಡ ಕಾರ್ಯಕರ್ತರಿಗೆ ಮನೆಗಳನ್ನು ನೀಡಿಲ್ಲ. ಕೂಡಲೇ ಕನ್ನಡಪರ ಕಾರ್ಯಕರ್ತರನ್ನು ಗುರುತಿಸಿ ಅವರಿಗೆ ಆದ್ಯತೆ ನೀಡಿ, ಮನೆಗಳನ್ನು ಕಟ್ಟಿಸಿ ಕೊಟ್ಟು ಪ್ರತಿ ಜಿಲ್ಲೆಗೊಂದು ಕನ್ನಡ ಕಾಲೋನಿ ನಿರ್ಮಿಸಿ ಕೊಡಬೇಕೆಂದು ಸುವರ್ಣ ಕರ್ನಾಟಕ ಹಿತರಕ್ಷಣಾ ವೇದಿಕೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಯಾಖೂಬ್ ಕೊಟ್ಟೂರು ಪ್ರಕಟಣೆಯಲ್ಲಿ ಆಗ್ರಹಿಸಿದ್ದಾರೆ.

### ಸ್ಪೀಡ್ ಪೋಸ್ಟ್ ಬುಕ್ಕಿಂಗ್ ಅವಧಿ ವಿಸ್ತರಣೆ

» ದಾವಣಗೆರೆ

ನಗರದ ಪ್ರಧಾನ ಅಂಚೆ ಕಚೇರಿಯಲ್ಲಿ ರಿಜಿಸ್ಟರ್ಡ್, ಪಾರ್ಸೆಲ್, ಸ್ಪೀಡ್ ಪೋಸ್ಟ್‌ಗಳ ಬುಕ್ಕಿಂಗ್ ಅವಧಿಯನ್ನು ಸಂಜೆ 6.30 ರವರೆಗೆ ಹಾಗೂ ರೈಲ್ವೆ ನಿಲ್ದಾಣದ ಮುಂಭಾಗದಲ್ಲಿನ ಆರ್‌ಎಂಎಸ್ ಅಂಚೆ ಕಚೇರಿಯಲ್ಲಿ ರಿಜಿಸ್ಟರ್ಡ್ ಹಾಗೂ ಸ್ಪೀಡ್ ಪೋಸ್ಟ್‌ಗಳ ಬುಕ್ಕಿಂಗ್ ಅವಧಿಯನ್ನು ಸಂಜೆ 6 ರಿಂದ ರಾತ್ರಿ 11 ಗಂಟೆಯವರೆಗೆ ಸಾರ್ವಜನಿಕರ ಅನುಕೂಲಕ್ಕಾಗಿ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಅಂಚೆ ಅಧೀಕ್ಷಕರು ತಿಳಿಸಿದ್ದಾರೆ.

### ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಆಹ್ವಾನ

» ದಾವಣಗೆರೆ

ಹೆಚ್.ಎ.ಎಲ್ ಬೆಂಗಳೂರು ಇವರು ಐ.ಟಿ.ಐ. (ಫಿಟ್ಟರ್, ಟರ್ನರ್, ಮೆಷಿನಿಸ್ಟ್, ವೆಲ್ಡರ್, ಅಔಕಿಂ, ಫೌಂಡ್ರಿಮನ್, ಶೀಟ್ ಮೆಟಲ್ ವರ್ಕರ್, ಕಾರ್ಪೆಂಟರ್, ಮೆಕಾನಿಕ್ ಆರ್&ಎಸಿ, ಟೂಲ್ ಆ್ಯಂಡ್ ಡೈ ಮೇಕರ್ ಮತ್ತು ಅಡ್ವಾನ್ಸ್ ಸಿಎನ್‌ಸಿ ಮಿಷಿನಿಂಗ್) ತೇರ್ಗಡೆ ಹೊಂದಿದ ಅಭ್ಯರ್ಥಿಗಳಿಂದ ಅಪ್ರೆಂಟೀಸ್ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆಯನ್ನು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ದಾವಣಗೆರೆ ಇಲ್ಲಿ ಅಥವಾ ಆನ್‌ಲೈನ್ ಮೂಲಕ ಪಡೆದುಕೊಂಡು, www.apprenticeshipindia.org/candidate-registration ಈ ವೆಬ್‌ಸೈಟ್‌ನಲ್ಲಿ ನೋಂದಾಯಿಸಿ, ನೋಂದಣಿ ಸಂಖ್ಯೆಯನ್ನು ಅರ್ಜಿಯಲ್ಲಿ ನಮೂದಿಸಿ, ಅರ್ಜಿ ಸಲ್ಲಿಸಬಹುದಾಗಿದೆ . ಅರ್ಜಿ ಸಲ್ಲಿಸುವ ಕೊನೆಯ ಡಿ.30 ಕೊನೆಯ ದಿನ. ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಜಿಲ್ಲಾ ಆಡಳಿತ ಭವನ, ದಾವಣಗೆರೆ ದೂರವಾಣಿ ಸಂಖ್ಯೆ: 08192-259446ಇವರುಗಳನ್ನು ಸಂಪರ್ಕಿಸಲು ಉದ್ಯೋಗಾಧಿಕಾರಿ ರವೀಂದ್ರ.ಡಿ. ತಿಳಿಸಿದ್ದಾರೆ.

### ದಾವಣಗೆರೆ: ಇಂದು ವಿದ್ಯುತ್ ವ್ಯತ್ಯಯ

» ದಾವಣಗೆರೆ

ಜಲಸಿರಿ ಯೋಜನೆ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಡಿ.18 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಎಸ್.ಎಸ್. ಹೈಟೆಕ್ ಫೀಡರ್ ವ್ಯಾಪ್ತಿಯ ಎಸ್.ಓ.ಜಿ ಕಾಲೋನಿ ಎ, ಬಿ & ಸಿ ಬ್ಲಾಕ್, ಬುದ್ದ, ಬಸವ ಭೀಮ ನಗರ ,ಕರ್ನಾಟಕ ಬೀಜ ನಿಗಮ ಹಾಗೂ ಸುತ್ತಮುತ್ತಲಿನ ಪ್ರದೇಶ ಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

### ಜಗಳೂರು ತಾಲ್ಲೂಕು ಪಂಚಾಯಿತಿಯಲ್ಲಿ ಲೋಕಾಯುಕ್ತರಿಂದ ಅಹವಾಲು ಸ್ವೀಕಾರ




» ದಾವಣಗೆರೆ

ದಾವಣಗೆರೆ ವಿಭಾಗದ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ಜಗಳೂರು ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ಡಿ.19 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಸಾರ್ವಜನಿಕರ ಅಹವಾಲು ಸ್ವೀಕರಿಸುವರು. ಸಾರ್ವಜನಿಕರು ವಿವಿಧ ಇಲಾಖೆಗಳಿಗೆ ಸಲ್ಲಿಸಿದ ಅರ್ಜಿಗಳನ್ನು ವಿಲೇ ಮಾಡದೇ ಬಾಕಿ ಇಟ್ಟದಲ್ಲಿ ಅಂತಹ ದೂರುಗಳನ್ನು ಸಲ್ಲಿಸಬಹುದೆಂದು ತಿಳಿಸಿದ್ದಾರೆ.

---

**ಜೇನು ಕೃಷಿ ಕುರಿತು ರೈತರಿಗೆ ಒಂದು ತರಬೇತಿ -ಉಪ ಕೃಷಿ ನಿರ್ದೇಶಕ ಶಿವಕುಮಾರ್**

# ರೈತರ ಆದಾಯ ಹೆಚ್ಚಳಕ್ಕೆ ಜೇನು ಕೃಷಿ ಸಹಕಾರಿ

» ಚಿತ್ರದುರ್ಗ





ಜೇನು ಕೃಷಿಯು ಪರಿಸರ ಸ್ನೇಹಿಯಾಗಿದ್ದು, ಕೃಷಿ ಹಾಗೂ ತೋಟಗಾರಿಕೆ ಬೆಳೆಗಳಲ್ಲಿ ಇಳುವರಿ ಹೆಚ್ಚಿಸುವಲ್ಲಿ ಸಹಕಾರಿಯಾಗಿದ್ದು, ಇದರ ಜತೆಗೆ ರೈತರ ಆದಾಯವನ್ನೂ ಹೆಚ್ಚಿಸುತ್ತದೆ ಎಂದು ಚಿತ್ರದುರ್ಗ ಉಪ ಕೃಷಿ ನಿರ್ದೇಶಕ ಶಿವಕುಮಾರ್ ಹೇಳಿದರು.

ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ "ಜೇನು ಕೃಷಿ" ಕುರಿತು ರೈತರಿಗೆ ಒಂದು ದಿನದ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದೇಶದ ಆರ್ಥಿಕ ಬೆಳವಣಿಗೆ ಹಾಗೂ ಜನರ ಆಹಾರದ ಉತ್ಪಾದನೆಯಲ್ಲಿ ಸುಸ್ಥಿರ ಕೃಷಿ ಅತ್ಯವಶ್ಯಕವಾಗಿದ್ದು, ಅನ್ನದಾತರ ಕೊಡುಗೆ ಬಹು ಮುಖ್ಯವಾಗಿದೆ. ರೈತರು ಸಮಗ್ರ ಕೃಷಿ ಪದ್ಧತಿ ಅನುಸರಿಸುವ ಮೂಲಕ ಆರ್ಥಿಕವಾಗಿ ಸಬಲರಾಗಲು ಸಾಧ್ಯ. ಈ ನಿಟ್ಟಿನಲ್ಲ ಜೇನು ಕೃಷಿಯು ಪರಿಸರಸ್ನೇಹಿಯಾಗಿದ್ದು, ಕೃಷಿ ಹಾಗೂ ತೋಟಗಾರಿಕೆ ಬೆಳೆಗಳಲ್ಲಿ ಇಳುವರಿ ಹೆಚ್ಚಿಸುವಲ್ಲಿ ಸಹಕಾರಿಯಾಗಿದೆ ಎಂದರು.

ಹಿರಿಯೂರು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ಮಂಜನಾಥ ಮಾತನಾಡಿ, ಹಿರಿಯೂರು ತಾಲ್ಲೂಕಿನಲ್ಲಿ ವಿವಿಧ ಬೆಳೆವೈವಿದ್ಯತೆಇದ್ದು,ಬೆಳೆಪರಿವರ್ತನೆಬಹು ಮುಖ್ಯವಾಗಿದ್ದು, ಮಣ್ಣಿನ ಗುಣಧರ್ಮ ಕಾಪಾಡಲು ಸಹಕಾರಿಯಾಗಿದೆ. ಜೇನು ಕೃಷಿಯ ಪರಾಗ ಸ್ಪರ್ಷ ಕ್ರಿಯೆಯಿಂದ ಸೂರ್ಯಕಾಂತಿ, ಅಡಿಕೆ, ತೆಂಗು ಮತ್ತು ಮುಂತಾದ ಬೆಳೆಗಳಲ್ಲಿ ಉತ್ತಮ ಇಳುವರಿ ಪಡೆಯಲು ಸಾಧ್ಯವೆಂದರು.

ನಿವೃತ್ತ ಸಹಾಯಕ ಕೃಷಿ ನಿರ್ದೇಶಕರು ಹಾಗೂ ಜೇನು ತಜ್ಞ ಶಾಂತವೀರಯ್ಯ ಅವರು, ರೈತರಿಗೆ ಜೇನು ಕೃಷಿಯ ತಾಂತ್ರಿಕತೆಯ ಕುರಿತು ಸವಿವರವಾಗಿ ಕಥಾರೂಪದಲ್ಲಿ ರೈತರಲ್ಲಿ ಆಸಕ್ತಿ ಮೂಡಿಸಿದರು. ಜಗತ್ತಿನ ಶೇ 90ಕ್ಕಿಂತ ಹೆಚ್ಚಿನ ವಿವಿಧ ಜಾತಿಯ ಸಸ್ಯಗಳಿಗೆ ಜೇನು ನೊಣಗಳಿಂದ ಪರಾಗಸ್ಪರ್ಷವಾಗುತ್ತದೆ. ಪ್ರತಿ ಎಕರೆಗೆ 2-4 ಜೇನು ಪೆಟ್ಟಿಗೆಗಳನ್ನು ಇಡುವುದರಿಂದ ಅಡಿಕೆ ಮತ್ತು ತೆಂಗಿನ ಬೆಳೆಗಳಲ್ಲಿ ಉತ್ತಮ ಇಳುವರಿ ಸಾಧ್ಯ ಎಂದರು.

ಸೂರ್ಯಕಾಂತಿ ಬೆಳೆಯಲ್ಲಿ ಶೇ. 70 ಕ್ಕಿಂತ ಅಧಿಕ ಇಳುಪಡೆಯಲು ಜೇನು ಕೃಷಿ ಸಹಕಾರಿಯಾಗಿದೆ. ಕೃಷಿಯ ಉತ್ಪಾದನೆ ಹೆಚ್ಚಿಸುವುದಲ್ಲದೆ, ಜೇನುತುಪ್ಪವು ಆರೋಗ್ಯದ ದೃಷ್ಟಿಯಲ್ಲಿ ಅಮೃತ ಸಮಾನವಾಗಿದ್ದು, ಅಸ್ತಮಾ, ಮಲಬದ್ಧತೆ, ಗ್ಯಾಸ್ಟ್ರಿಕ್, ಸಂಧಿವಾತ ಕಾಯಿಲೆ ನಿವಾರಿಸಲು, ದೇಹದ ಬೊಜ್ಜು ಕರಗಿಸಲು ಮತ್ತು ಮಕ್ಕಳಲ್ಲಿ ರೋಗ ನಿರೋಧಕ ಶಕ್ತಿ ಮತ್ತು ಬುದ್ಧಿವಂತಿಕೆಯನ್ನು ಹೆಚ್ಚಿಸಲು ಸಹಕಾರಿಯಾಗಿದೆ ಎಂದರು.

ಜೇನುತುಪ್ಪದಲ್ಲಿ ಶರೀರಕ್ಕೆ ಬೇಕಾಗುವ 45 ಪೋಷಕಾಂಶಗಳು ಸುಲಭವಾಗಿ ಜೀರ್ಣವಾಗುವ ರೂಪದಲ್ಲಿ ದೊರೆಯುತ್ತವೆ. ಜೇನು ಕುಟುಂಬವು ಒಗ್ಗಟ್ಟಿನಿಂದ ದುಡಿಯುವುದನ್ನು ನೋಡಿ ನಾವು ಸಹ ಕಲಿಯುವುದು ಬಹಳವಿದೆ. ತಾಂತ್ರಿಕ ತರಬೇತಿಯ ನಂತರ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ ಬಬ್ಬೂರು ಫಾರಂನ ಮಾವಿನ ತೋಪಿನಲ್ಲಿ ಇದ್ದ ಜೇನು ಪೆಟ್ಟಿಗೆ ಘಟಕಕ್ಕೆ ಭೇಟಿ ನೀಡಿ, ರೈತರಿಗೆ ಜೇನು ಪೆಟ್ಟಿಗೆಯ ನಿರ್ವಹಣೆಯ ಪ್ರಾಯೋಗಿಕ ವಿವರ, ಜೇನು ನೊಣದ ಜೀವನಚರಿತ್ರೆ, ಜೇನು ಕಟುಂಬದಲ್ಲಿ ರಾಣಿ ಜೇನು, ಗಂಡು ಜೇನು ನೊಣ ಮತ್ತು ಕೆಲಸಗಾರರ ಪಾತ್ರದ ಕುರಿತು ಸಮಗ್ರ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಬಬ್ಬೂರು ಫಾರಂ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕ ಆರ್.ರಜನೀಕಾಂತ್, ಕೃಷಿ ಅಧಿಕಾರಿಗಳಾದ ರಂಜಿತಾ, ಪವಿತ್ರ ಹಾಗೂ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಿಬ್ಬಂದಿ ಹಾಗೂ ರೈತರು ಇದ್ದರು.

---

# ಇಂದಿರಾ ಕ್ಯಾಂಟೀನ್‌ಗೆ ಜಿಲ್ಲಾಧಿಕಾರಿ ದಿಢೀರ್ ಭೇಟಿ: ಗುಣಮಟ್ಟ ಕಾಯ್ದುಕೊಳ್ಳಲು ತಾಕೀತು

» ಚಿತ್ರದುರ್ಗ





ನಗರದ ಪ್ರವಾಸಿ ಮಂದಿರ ಬಳಿ ಇರುವ ಇಂದಿರಾ ಕ್ಯಾಂಟೀನ್‌ಗೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಶನಿವಾರ ಬೆಳ್ಳಂ ಬೆಳಿಗ್ಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿ, ಕ್ಯಾಂಟೀನ್‌ನಲ್ಲಿ ಸಾರ್ವಜನಿಕರಿಗೆ ಒದಗಿಸುವ ಆಹಾರದ ಗುಣಮಟ್ಟ, ಶುಚಿ-ರುಚಿ ಕಾಯ್ದುಕೊಳ್ಳುವಂತೆ ಕ್ಯಾಂಟೀನ್ ಸಿಬ್ಬಂದಿಗೆ ತಾಕೀತು ಮಾಡಿದರು.

ಪ್ರವಾಸಿ ಮಂದಿರದ ಬಳಿ ಇರುವ ಇಂದಿರಾ ಕ್ಯಾಂಟೀನ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿಗಳು, ಅಡುಗೆ ತಯಾರಿಕೆ ಕೊಠಡಿಗೆ ಭೇಟಿ ನೀಡಿ, ಆಹಾರದ ಗುಣಮಟ್ಟ, ಶುಚಿ-ರುಚಿ ಕೊರತೆ, ದಾಖಲೆಗಳ ಅಸಮರ್ಪಕ ನಿರ್ವಹಣೆ ಬಗ್ಗೆ ಸಾರ್ವಜನಿಕರಿಂದ ದೂರುಗಳು ಕೇಳಿ ಬರುತ್ತಿವೆ. ಕ್ಯಾಂಟೀನ್‌ನಲ್ಲಿ ಉಪಹಾರ ಹಾಗೂ ಊಟದ ತಯಾರಿಕೆ ಉತ್ತಮವಾಗಿಲ್ಲ, ಉಪಹಾರ ರುಚಿಕಟ್ಟಾಗಲು ಅಗತ್ಯವಿರುವ ಸಾಮಗ್ರಿಗಳ ಸಮರ್ಪಕ ಬಳಕೆಯಾಗುತ್ತಿಲ್ಲ, ಹೀಗಾಗಿ ಸಾರ್ವಜನಿಕರು ಇಂದಿರಾ ಕ್ಯಾಂಟೀನ್‌ಗೆ ಹೆಚ್ಚು ಬರುತ್ತಿಲ್ಲ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಕಡಿಮೆ ದರದಲ್ಲಿ ಬಡವರಿಗೆ ಉತ್ತಮ ಗುಣಮಟ್ಟದ ಹಾಗೂ ರುಚಿಯಾದ ಊಟೋಪಹಾರ ಒದಗಿಸಬೇಕು ಎಂಬ ಸದುದ್ದೇಶದಿಂದ ಸರ್ಕಾರ ವಿವಿಧೆಡೆ ಇಂದಿರಾ ಕ್ಯಾಂಟೀನ್ ಗಳನ್ನು ಪ್ರಾರಂಭಿಸಿ, ನಡೆಸಲಾಗುತ್ತಿದೆ. ಆದರೆ ಸಿಬ್ಬಂದಿಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಕ್ಯಾಂಟೀನ್ ನಿರ್ವಹಣೆ ಸರಿಯಾಗಿ ಆಗುತ್ತಿಲ್ಲ. ಕ್ಯಾಂಟೀನ್‌ಗೆ ಎಷ್ಟು ಆಹಾರ ಧಾನ್ಯ ಹಾಗೂ ಅಡುಗೆ ಸಾಮಗ್ರಿ ಸ್ವೀಕರಿಸಲಾಗಿದೆ, ಎಷ್ಟು ಪ್ರಮಾಣದಲ್ಲಿ ಎಷ್ಟು ಜನರಿಗೆ ಊಟೋಪಹಾರ ವಿತರಿಸಲಾಗಿದೆ ಎಂಬುದರ ಬಗ್ಗೆ ಸಮರ್ಪಕವಾಗಿ ದಾಖಲೆಗಳನ್ನು ನಿರ್ವಹಿಸಿಲ್ಲ ಎಂದು ತೀವ್ರ ಅಸಮಧಾನ ವ್ಯಕ್ತಪಡಿಸಿದರು.

ಇಂದಿರಾ ಕ್ಯಾಂಟೀನ್‌ಗೆ ಆಹಾರದ ಗುಣಮಟ್ಟ ಪರಿಶೀಲನೆಗೆ ಸಂಬಂಧಪಟ್ಟ ಅಧಿಕಾರಿ ಪ್ರತಿ ನಿತ್ಯ ಭೇಟಿ ಮಾಡಿ ಪರಿಶೀಲಿಸಬೇಕು,

ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಯ ಪೌರಾಯುಕ್ತರು, ಮುಖ್ಯಾಧಿಕಾರಿಗಳು ವಾರಕ್ಕೊಮ್ಮೆ ಕ್ಯಾಂಟೀನ್‌ಗೆ ಭೇಟಿ ನೀಡಿ, ಅಲ್ಲಿಯೇ ಉಪಹಾರ ಮತ್ತು ಊಟ ಸೇವಿಸಿ ಪರಿಶೀಲಿಸಬೇಕು. ಅಲ್ಲದೆ ಅಡುಗೆ ಸಾಮಗ್ರಿಗಳ ದಾಸ್ತಾನು, ಬಳಕೆ, ಊಟೋಪಹಾರ ವಿತರಣೆ ಪ್ರಮಾಣ ಕುರಿತಂತೆ ನಿತ್ಯ ರಜಿಸ್ಟರ್‌ನಲ್ಲಿ ಮಾಹಿತಿ ದಾಖಲಾಗಬೇಕು, ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಪರಿಶೀಲನೆ ನಡೆಸಬೇಕು, ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಆರೋಗ್ಯ ನಿರೀಕ್ಷಕರು ಸ್ವಚ್ಛತೆಹಾಗೂಶುಚಿತ್ವನಿರ್ವಹಣೆಗೆಸಂಬಂಧಿಸಿದ ಅಧಿಕಾರಿಗಳು ನಿತ್ಯ ಕ್ಯಾಂಟೀನ್‌ನಲ್ಲಿನ ಸ್ವಚ್ಛತೆ ಬಗ್ಗೆ ಪರಿಶೀಲಿಸಬೇಕು ಎಂದು ಜಿಲ್ಲಾಧಿಕಾರಿಗಳು ತಾಕೀತು ಮಾಡಿದರು. ಬರುವ ದಿನಗಳಲ್ಲಿ ಜಿಲ್ಲೆಯಲ್ಲಿನ ಇಂದಿರಾ ಕ್ಯಾಂಟೀನ್‌ಗಳಿಗೆ ಆಕಸ್ಮಿಕ ಭೇಟಿ ನೀಡಿ ಪರಿಶೀಲನೆ ನಡೆಸಲಾಗುವುದು, ಲೋಪದೋಷಗಳು ಕಂಡುಬಂದಲ್ಲಿ ಸಂಬಂಧಪಟ್ಟ ಸಿಬ್ಬಂದಿ, ಅಧಿಕಾರಿಗಳನ್ನು ಹೊಣೆಗಾರರನ್ನಾಗಿಸಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಅವರು ಹೇಳಿದರು.

ಕಸ ವಿಲೇವಾರಿ ಸಮರ್ಪಕವಾಗಿಸಿ : ನಗರದ ವಿವಿಧೆಡೆ ತೆರಳಿ ಪರಿಶೀಲಿಸಿದ ಜಿಲ್ಲಾಧಿಕಾರಿಗಳು, ಮನೆ ಮನೆಯಿಂದ ಕಸ ಸಂಗ್ರಹಿಸಿ, ವಿಲೇವಾರಿ ಮಾಡುವ ಕಾರ್ಯ ಸಮರ್ಪಕವಾಗಿ ಆಗಬೇಕು, ಹಸಿ ಕಸ ಮತ್ತು ಒಣ ಕಸವನ್ನು ವಿಂಗಡಿಸಿಯೇ ಪಡೆಯಬೇಕು, ನಗರದ ಚರಂಡಿಗಳನ್ನು ಸ್ವಚ್ಛವಾಗಿರಿಸಬೇಕು ಎಂದು ನಗರಸಭೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ನಗರಸಭೆ ಪೌರಾಯುಕ್ತೆ ರೇಣುಕಾ, ಪರಿಸರ ಅಭಿಯಂತರ ಜಾಫರ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

---

**ಸೈನಿಕ್ ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ**

# ಸೈನಿಕರ ಕಲ್ಯಾಣ ನಿಧಿ ಹೆಚ್ಚು ಸಂಗ್ರಹಿಸಲು ಒತ್ತು



» ದಾವಣಗೆರೆ

ಸಶಸ್ತ ಪಡೆಗಳ ಧ್ವಜ ದಿನಾಚರಣೆ ಅಂಗವಾಗಿ ಸೈನಿಕರ ಕಲ್ಯಾಣ ನಿಧಿಯನ್ನು ಈ ವರ್ಷವೂ ದಾವಣಗೆರೆಯಿಂದ ಹೆಚ್ಚು ಸಂಗ್ರಹಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ. ತಿಳಿಸಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ ಅಂಗವಾಗಿ ಸೈನಿಕರ ಕಲ್ಯಾಣ ನಿಧಿಯನ್ನು ಸಂಗ್ರಹಿಸಲು ಧ್ವಜ ಬಿಡುಗಡೆ ಮಾಡಿ ಮಾತನಾಡಿದರು. ಸೈನಿಕರು ದೇಶ ರಕ್ಷಣೆಯಲ್ಲಿ ತಮ್ಮ ನಿಸ್ವಾರ್ಥ ಸೇವೆ ಸಲ್ಲಿಸುತ್ತಾರೆ. ಈ ವೇಳೆ ಮರಣವೂ ಹೊಂದಬಹುದು ಮತ್ತು ಗಾಯಾಳುಗಳಾಗಬಹುದು. ಸೈನಿಕರಿಗೆ ಮತ್ತು ಇವರ ಕುಟುಂಬದವರಿಗೆ ನೆರವಾಗಲು ಸೈನಿಕರ ಕಲ್ಯಾಣ ನಿಧಿ ಸಹಕಾರಿಯಾಗಲಿದೆ. ಸೈನಿಕ್ ವೆಲ್ಫೇರ್ ಬೋರ್ಡ್ ಎನ್ನುವುದು ನಮ್ಮ ದೇಶದ ಸೈನಿಕರ ಅಭಿವೃದ್ಧಿಗಾಗಿ ರಚನೆಯಾಗಿರುವ ಒಂದು ವಿಶೇಷ ಘಟಕವಾಗಿದೆ. ಸೈನಿಕರ ಕಲ್ಯಾಣ ನಿಧಿಗೆ ಕಳೆದ ವರ್ಷ ದಾವಣಗೆರೆ ಜಿಲ್ಲೆಯಿಂದ ಹೆಚ್ಚು ನಿಧಿಯನ್ನು ಸಂಗ್ರಹಿಸಲಾಗಿತ್ತು. ಇದಕ್ಕಾಗಿ ಡಿಸೆಂಬರ್ 7 ರಂದು ರಾಜ್ಯಪಾಲರು ಗೌರವಿಸಿ ಸನ್ಮಾನಿಸಿದ್ದರು. ಈ ಬಾರಿಯೂ ಜಿಲ್ಲೆಯ ಎಲ್ಲಾ ಇಲಾಖೆಯವರು ಹೆಚ್ಚಿನ ಪ್ರಮಾಣದಲ್ಲಿ ಧನಸಹಾಯ ಮಾಡಿ ಸೈನಿಕರ ಅಭಿವೃದ್ಧಿಗೋಸ್ಕರ ಧ್ವಜ ನಿಧಿಯನ್ನು ಸಂಗ್ರಹಿಸಬೇಕಾಗಿದೆ ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್ ಮಾತನಾಡಿ ದೇಶದ ಗಡಿಯಲ್ಲಿ ಸೈನಿಕರು ಸೆಣಸುವ ಮೂಲಕ ನಮ್ಮೆಲ್ಲರನ್ನು ರಕ್ಷಿಸುವರು. ಕಳೆದ ವರ್ಷದಂತೆ ಎಲ್ಲಾ ಇಲಾಖೆಗಳ ಸಹಕಾರದಿಂದ ಹೆಚ್ಚಿನ ಪ್ರಮಾಣದಲ್ಲಿ ಸೈನಿಕರ ಕಲ್ಯಾಣ ನಿಧಿಯನ್ನು ಸಂಗ್ರಹಿಸಲಾಗುತ್ತದೆ ಎಂದರು. ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಸೈನಿಕ ಕಲ್ಯಾಣ ಮಂಡಳಿ ಹಾಗೂ ಪುನರ್ವಸತಿ ಇಲಾಖೆ ಉಪನಿರ್ದೇಶಕ ಡಾ; ಸಿ.ಎ.ಹಿರೇಮಠ, ಜಿಲ್ಲಾ ಮಾಜಿ ಸೈನಿಕರ ಸಂಘದ ಉಪಾಧ್ಯಕ್ಷರಾದ ಮಹೇಂದ್ರಕರ್, ಕಾರ್ಯದರ್ಶಿ ಮಂಜುನಾಥ ಪಿಸಾಳೆ, ಸಂಘದ ನಿರ್ದೇಶಕರಾದ ಮಾಲಗೌಡ ಪಾಟೀಲ್, ಬಿ.ವಿ.ಚಂದ್ರಪ್ಪ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

---

## ಪ್ರಮುಖ ಸುದ್ದಿ

**ಮತದಾರರಲ್ಲಿ ವಿದ್ಯುನ್ಮಾನ ಮತಯಂತ್ರಗಳ ಬಗ್ಗೆ ಅರಿವು ಹಾಗೂ ಜಾಗೃತಿ ಮೂಡಿಸುವ ಕಾರ್ಯಕ್ರಮಕ್ಕೆ ಡಿಸಿ ದಿವ್ಯಪ್ರಭು ಜಿ.ಆರ್.ಜೆ ಚಾಲನೆ**

# ಇವಿಎಂ, ವಿವಿ ಪ್ಯಾಟ್ ಬಳಕೆ ಕುರಿತು ಪ್ರಾತ್ಯಕ್ಷಿಕೆ

» ಚಿತ್ರದುರ್ಗ




ಮುಂಬರುವ ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಸಂಬಂಧ ಮತದಾರರಲ್ಲಿ ವಿದ್ಯುನ್ಮಾನ ಮತಯಂತ್ರ (ಇವಿಎಂ) ಹಾಗೂ ಮತದಾನ ಖಾತ್ರಿ ಯಂತ್ರ (ವಿ.ವಿ.ಪ್ಯಾಟ್) ಬಳಕೆ ಕುರಿತಂತೆ ಅರಿವು ಹಾಗೂ ಜಾಗೃತಿ ಮೂಡಿಸುವ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಚಾಲನೆ ನೀಡಿದರು.

ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಆವರಣದಲ್ಲಿ ಶನಿವಾರ ವಿದ್ಯುನ್ಮಾನ ಮತಯಂತ್ರ ತರಬೇತಿ ಹಾಗೂ ಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ವಿದ್ಯುನ್ಮಾನ ಮತಯಂತ್ರಗಳ ಬಗ್ಗೆ ಸಾರ್ವಜನಿಕರಿಗೆ ಮತ ಚಲಾಯಿಸುವ ವಿಧಾನದ ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ ಜಾಗೃತಿ ಮೂಡಿಸಲಾಯಿತು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ವಿದ್ಯುನ್ಮಾನ ಮತಯಂತ್ರ ಬಳಕೆ ಹಾಗೂ ಮತದಾನ ಖಾತ್ರಿ ಕುರಿತಂತೆ ವಿವಿ ಪ್ಯಾಟ್ ಬಳಕೆ ಬಗ್ಗೆ ಪ್ರಾತ್ಯಕ್ಷತೆ ಮೂಲಕ ಮತದಾರರಲ್ಲಿ ಅರಿವು ಹಾಗೂ ಜಾಗೃತಿ ಮೂಡಿಸಲು ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ಮತದಾರರು ತಮ್ಮ ಮತಗಟ್ಟೆ ವ್ಯಾಪ್ತಿಯಲ್ಲಿ ನಡೆಸಲಾಗುವ ಪ್ರಾತ್ಯಕ್ಷಿಕೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ವಿದ್ಯುನ್ಮಾನ ಮತಯಂತ್ರದ ಕಾರ್ಯ ವ್ಯವಸ್ಥೆ, ಮತದಾನ ಮಾಡಿದ ಬಗ್ಗೆ ಖಾತರಿ ಪಡಿಸಿಕೊಳ್ಳುವ ಕಾರ್ಯದಲ್ಲಿ ಪಾಲ್ಗೊಂಡು, ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

2024ರ ಫೆಬ್ರವರಿ 28 ರವರೆಗೆ ಜಿಲ್ಲೆಯಾದ್ಯಂತ ವಿದ್ಯುನ್ಮಾನ ಮತಯಂತ್ರಗಳ ಅರಿವು ಹಾಗೂ ಜಾಗೃತಿ ಅಭಿಯಾನ ನಡೆಯಲಿದ್ದು, ಜಿಲ್ಲೆಯಲ್ಲಿನ 1661 ಮತಗಟ್ಟೆಗಳ ವ್ಯಾಪ್ತಿಯ 1206 ಸ್ಥಳಗಳಲ್ಲಿ ಪ್ರಾತ್ಯಕ್ಷಿಕೆ ನಡೆಸಲಾಗುವುದು. ಈ ಪ್ರಾತ್ಯಕ್ಷಿಕೆಯಲ್ಲಿ ಮತದಾರರು ಪಾಲ್ಗೊಂಡು ಅಣಕು ಮತದಾನ ಮಾಡಿ, ಇವಿಎಂ ಯಂತ್ರದಲ್ಲಿ ಮತ ಚಲಾಯಿಸುವ ಹಾಗೂ ಮತದಾನ ಖಾತ್ರಿ ಮಾಡಿಕೊಳ್ಳುವ ಬಗ್ಗೆ ಖುದ್ದು ಮನವರಿಕೆ ಮಾಡಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿಯೂ ಜಾಗೃತಿ ಅಭಿಯಾನ ಪ್ರಾರಂಭಿಸಲಾಗಿದ್ದು, ಇದಕ್ಕಾಗಿ 13 ಮೊಬೈಲ್ ಪ್ರಾತ್ಯಕ್ಷಿಕೆ ವಾಹನಗಳ ವ್ಯವಸ್ಥೆ ಮಾಡಲಾಗಿದೆ.

152 ಸೆಕ್ಟರ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದ ಅವರು, ಚಿತ್ರದುರ್ಗ ವಿಧಾನಸಭಾ ಕ್ಷೇತ್ರದಲ್ಲಿ 175, ಮೊಳಕಾಲ್ಮುರು-207, ಚಳ್ಳಕೆರೆ-180, ಹಿರಿಯೂರು-203, ಹೊಸದುರ್ಗ-195 ಹಾಗೂ ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದಲ್ಲಿ 246 ಅಣಕು ಪ್ರದರ್ಶನ ನಡೆಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತೀಕ್, ಚುನಾವಣಾ ಶಿರಸ್ತೆದಾರ್ ಮಲ್ಲಿಕಾರ್ಜುನ್ ಸೇರಿದಂತೆ ಚುನಾವಣಾ ಶಾಖೆಯ ಸಿಬ್ಬಂದಿ ಸೇರಿದಂತೆ ಮತ್ತಿತರರು ಇದ್ದರು.

## ಫಾಸ್ಟ್ ನ್ಯೂಸ್

### ಬೇವಿನಹಳ್ಳಿ ಕರಿಯಮ್ಮ ದೇವಿಯ ಸಂಭ್ರಮದ ಕಾರ್ತಿಕ ಮಹೋತ್ಸವ



» **ಹೊಸದುರ್ಗ**

ತಾಲೂಕಿನ ಸುಪ್ರಸಿದ್ಧ ಪುಣ್ಯಕ್ಷೇತ್ರ ಬೇವಿನಹಳ್ಳಿ ಗ್ರಾಮದ ಬೆಟ್ಟದ ಮೇಲೆ ನೆಲೆಸಿರುವ ಶಕ್ತಿ ದೇವತೆ ಶ್ರೀ ಕರಿಯಮ್ಮ ದೇವಿಯ ಕಾರ್ತಿಕ ಮಹೋತ್ಸವ ಶುಕ್ರವಾರ ಮತ್ತು ಶನಿವಾರ ಸಂಭ್ರಮ ಸಡಗರದಿಂದ ವಿಜೃಂಭಣೆಯಿಂದ ನಡೆಯಿತು. ಶುಕ್ರವಾರ ಸಂಜೆ ಧಾರ್ಮಿಕ ಕಾರ್ಣಿಕದಂತೆ ಲಕ್ಕಿಹಳ್ಳಿ ಗ್ರಾಮದಿಂದ ಬೇವಿನಹಳ್ಳಿ ಗ್ರಾಮದ ಬೆಟ್ಟದ ಮೇಲಿರುವ ದೇವಾಲಯಕ್ಕೆ ಅಮ್ಮನವರನ್ನು ಕರೆತರಲಾಯಿತು. ನಂತರ ಅಮ್ಮನವರಿಗೆ ಪೂಜೆಸಲ್ಲಿಸಿದ ಬಳಿಕ ದೀಪ ಬೆಳಗುವ ಮೂಲಕ ಕಾರ್ತಿಕೋತ್ಸವ ನಡೆಸಲಾಯಿತು. ಶನಿವಾರ ಬೆಳಿಗ್ಗೆಯಿಂದಲೂ ಸಂಜೆಯವರೆಗೆ ಮಾಡದಕೆರೆ, ರಂಗವನಹಳ್ಳಿ, ರಾಮಜ್ಜನಹಳ್ಳಿ, ಗಡಿಯಪ್ಪನಟ್ಟಿ, ಮಲ್ಲಾಪುರ, ಪೂಜಾರಹಟ್ಟಿ, ಅಂಚಿಬಾರಿಹಟ್ಟಿ, ನಾಗಯ್ಯನಹಟ್ಟಿ, ತಿಮ್ಮಯ್ಯನಹಟ್ಟಿ, ಕೆರೆಕೋಡಿಹಟ್ಟಿ, ದಾಸಜ್ಜನಹಟ್ಟಿ, ಅಯ್ಯನಹಳ್ಳಿ, ಲಕ್ಕಿಹಳ್ಳಿ, ಅತ್ತಿಮಗೆ ಮತ್ತು ಬೇವಿನಹಳ್ಳಿ ಸೇರಿದಂತೆ ಸುತ್ತಮುತ್ತಲ ಗ್ರಾಮಗಳ ಸಾವಿರಾರು ಭಕ್ತರು ದೇವಾಲಯಕ್ಕೆ ಬಂದು ದೇವರಿಗೆ ಪೂಜೆಸಲ್ಲಿಸಿ ಭಕ್ತಿ ಸಮರ್ಪಿಸಿದರು. ಇನ್ನು ದೇವಾಲಯವನ್ನು ಹಸಿರು ತಳಿರು ತೋರಣ, ಬಗೆ ಬಗೆಯ ಬಣ್ಣದ ಹೂಗಳು, ವಿದ್ಯುತ್ ದೀಪಗಳಿಂದ ಅಲಂಕಾರ ಮಾಡಲಾಗಿತ್ತು. ರಾತ್ರಿ 10 ಗಂಟೆ ಸುಮಾರಿಗೆ ಅಮ್ಮನವರನ್ನು ಬೆಟ್ಟದ ಮೇಲಿಂದ ಬೇವಿನಹಳ್ಳಿ ಗ್ರಾಮದ ಭಕ್ತರ ಮನೆಗಳಿಗೆ ಕರೆತರಲಾಯಿತು.

### ಶಕ್ತಿ ಪ್ರದರ್ಶನ ಮಾಡಿದ ಲೋಕ ಆಕಾಂಕ್ಷಿಗಳು



» **ಮೊದಲ ಪುಟದಿಂದ**

ಇದರಲ್ಲಿ ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ, ಬಿ.ಎನ್. ಚಂದ್ರಪ್ಪ, ಜಿ.ಎಸ್.ಮಂಜುನಾಥ್, ಪಿ.ರಘು, ವಿನಯ ತಿಮ್ಮಾಪುರ, ಹನುಮಂತಪ್ಪ ಗೋಡೆಮನೆ, ಪಾವಗಡ ಕುಮಾರಸ್ವಾಮಿ, ಎಂ.ರಾಮಪ್ಪ, ಸುನೀಲ್‌ಕುಮಾರ್, ಓ.ಶಂಕರ್, ಡಿ.ಎನ್. ಮೈಲಾರಪ್ಪ, ಹೆಚ್.ಸಿ. ನಿರಂಜನಮೂರ್ತಿ ಸೇರಿದಂತೆ ಹಲವು ಆಕಾಂಕ್ಷಿಗಳಿದ್ದಾರೆ.

ಈ ಸಂದರ್ಭದಲ್ಲಿ ಸಚಿವರಾದ ಡಿ.ಸುಧಾಕರ್, ಶಾಸಕರುಗಳಾದ ಜಿ.ವಿ.ಗೋವಿಂದಪ್ಪ, ರಘುಮೂರ್ತಿ, ಎನ್.ವೈ ಗೋಪಾಲಕೃಷ್ಣ, ಮಾಜಿ ಸಚಿವರಾದ ಹೆಚ್.ಅಂಜನೇಯ, ಮಾಜಿ ಶಾಸಕರಾಧ ಉಮಾಪತಿ, ಡಿಸಿಸಿ ಅಧ್ಯಕ್ಷರಾಧ ತಾಜ್ ಪೀರ್, ಕಾರ್ಯಾಧ್ಯಕ್ಷರಾದ ಹಾಲಸ್ವಾಮಿ, ಪ್ರಧಾನ ಕಾರ್ಯದರ್ಶಿಗಳಾದ ಸಂಪತ್ ಕುಮಾರ್, ಮೈಲಾರಪ್ಪ, ಮಹಿಳಾ ಘಟಕದ ಅಧ್ಯಕ್ಷರಾದ ಶ್ರೀಮತಿ ಗೀತಾ ನಂದಿನಿ ಗೌಡ, ಚಳ್ಳಕೆರೆ ನಗರಸದಭಾ ಸದಸ್ಯರಾದ ನಾಗರಾಜ್ ಇತರರು ಭಾಗವಹಿಸಿದ್ದರು.

### ಸಾಮಾನ್ಯ ಕಾರ್ಯಕರ್ತನಿಗೆ ಒಲಿಯುವುದೇ ಟಿಕೆಟ್?

» **ಮೊದಲ ಪುಟದಿಂದ**

ನಮ್ಮ ತಾಯಿ ದುರಗಮ್ಮ ಎರಡು ಬಾರಿ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ಹಿರೇಹಳ್ಳಿ ಗ್ರಾಮ ಪಂಚಾಯತಿ ಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ.ನಮ್ಮ ಕುಟುಂಬ ಕಾಂಗ್ರೆಸ್ ಪಕ್ಷದ ಎಲ್ಲಾ ಕೆಲಸಗಳಲ್ಲಿ ಹಾಗೂ ಹೋರಾಟದಲ್ಲಿ ಭಾಗವಹಿಸಿ ಜನರಿಂದ ಉತ್ತಮ ಅಭಿಪ್ರಾಯ ಹೊಂದಿದ್ದೇನೆ. ಹಾಲಿ ಕೆಪಿಸಿಸಿ ಪರಿಶಿಷ್ಟ ಜಾತಿ ವಿಭಾಗದ ರಾಜ್ಯ ಸಂಚಲಕರಾಗಿಕೆಲಸ ಮಾಡುತ್ತಿದ್ದೇನೆ. ಎಂಟು ವಿಧಾನಸಭಾ ಕ್ಷೇತ್ರಗಳಲ್ಲಿ ಕ್ಷೇತ್ರದ ಜನತೆಗೆ ಚಿರಪರಿಚಿತನಾಗಿ ಇದ್ದೇನೆ. ಪಕ್ಷದ ಹೈಕಮಾಂಡ್ ಯಾರಿಗೆ ಟಿಕೆಟ್ ಕೊಡುತ್ತದೆ ಅವರ ಪರವಾಗಿ ಕೆಲಸ ಮಾಡುತ್ತೇನೆ. ಹೈಕಮಾಂಡ್ ತೀರ್ಮಾನವೇ ಅಂತಿಮ ತೀರ್ಮಾನ ಎಂದು ಅವರು ಮಾತನಾಡಿದರು ದಲಿತ ಸಂಘರ್ಷ ಸಮಿತಿ ಹೋರಾಟಗಾರಾದ ದಿವಂಗತ ಎಂ. ಜಯಣ್ಣ ಅವರ ಮನೆಯಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ವೀಕ್ಷಕರಾದ ಎಚ್. ಸಿ ಮಹಾದೇವಪ್ಪರವರಿಗೆ ಸನ್ಮಾನಿಸಲಾಯಿತು.

# ಮಹಿಳೆ ಮೇಲೆ ದೌರ್ಜನ್ಯ: ಬಿಜೆಪಿ ಪ್ರತಿಭಟನೆ




» **ಚಿತ್ರದುರ್ಗ**

ರಾಜ್ಯದಲ್ಲಿಕಾನೂನುಸುವ್ಯವಸ್ಥೆಹಾಳಾಗಿದೆ. ಇಲ್ಲಿಮಹಿಳೆಯರಿಗೆರಕ್ಷಣೆಇಲ್ಲದಂತಾಗಿದೆ, ದಲಿತರು ಮತ್ತು ಮಹಿಳೆಯರ ಮೇಲೆ ದೌರ್ಜನ್ಯ ಮಾಡಿದವರಿಗೆ ಸರಿಯಾದ ಶಿಕ್ಷೆಯಾಗುತ್ತಿಲ್ಲ, ಕಾಂಗ್ರೆಸ್ ಸರ್ಕಾರ ದರಿದ್ರ ಸರ್ಕಾರ ಎಂದು ವಿಧಾನ ಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ ದೂರಿದ್ದಾರೆ.

ಚಿತ್ರದುರ್ಗ ಜಿಲ್ಲಾ ಭಾರತೀಯ ಜನತಾ ಪಾರ್ಟಿವತಿಯಿಂದ ನಗರದ ಸಂತೇಪೇಟೆ ವೃತ್ತದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಕಾಂಗ್ರೆಸ್ ಸರ್ಕಾರದ ವಿರುದ್ಧ ಪ್ರತಿಭಟನಾ ರ್‍ಯಾಲಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಕಳೆದ ಆರು ತಿಂಗಳಿಂದ ಸರ್ಕಾರ ನಡೆಯುತ್ತಿದೆ ಆದರೆ ಸರ್ಕಾರ ಇದೆಯೋ ಇಲ್ಲವೂ ಎಂಬಂತೆ ಆಗಿದೆ. ಜನತೆಯ ಕಷ್ಟಗಳಿಗೆ ಸರ್ಕಾರ ಸ್ಪಂದಿಸುತ್ತಿಲ್ಲ, ರೈತರ ನೋವಿಗೆ ಕಿವಿಗೂಡುತ್ತಿಲ್ಲ ತನ್ನದೇ ಆದ ರೀತಿಯಲ್ಲಿ ಸರ್ಕಾರವನ್ನು ನಡೆಸುತ್ತಿದೆ. ಮುಖ್ಯಮಂತ್ರಿಗಳಾದವರಿಗೆ ಬಡವರ ಕಷ್ಟ ಗೊತ್ತಿಲ್ಲ ಅವರ ಸಮಸ್ಯೆಗಳಿಗೆ ಏನು ಪರಿಹಾರವನ್ನು ಸಹಾ ಕೈಗೊಂಡಿಲ್ಲ ಎಂದು ದೂರಿದರು.

ಈ ಸರ್ಕಾರಕ್ಕೆ ಮಾನ ಮಾರ್ಯದೆ ಇಲ್ಲ ಸರ್ಕಾರ ಜನರಿಗೆ ಒಳ್ಳೆಯದನ್ನು ಮಾಡಲು ಬಂದಿಲ್ಲ, ದೇಶದಲ್ಲಿ ಕಾಂಗ್ರೆಸ್ ನಶಿಸಿ ಹೋಗುತ್ತಿದೆ. ಇದರಿಂದ ಕರ್ನಾಟಕ ಸರ್ಕಾರವನ್ನು ಎಟಿಎಂ ರೀತಿಯಲ್ಲಿ ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಇಲ್ಲಿನ ಹಣವನ್ನು ಬೇರೆ ರಾಜ್ಯಗಳ ಉಪಯೋಗಕ್ಕೆ ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ದೂರಿದ ನಾರಾಯಣಸ್ವಾಮಿ, ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಹಾಳು ಮಾಡುತ್ತಾರೆ ಎಂದುಮುಂಚಿನಿಮದಲೂಹೇಳಿಕೊಂಡು ಬರಲಾಗುತ್ತಿತು ಈಗ ಅದರಂತೆ ಕರ್ನಾಟಕವನ್ನು ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಎಟಿಎಂ ಮಾಡಿಕೊಂಡಿದೆ ಸುಲಿಗೆ ಮಾಡುತ್ತಿದ್ದಾರೆ. ಗ್ಯಾರೆಂಟಿಯನ್ನು ನೀಡುವುದರ ಮೂಲಕ ಮೂಗಿಗೆ ತುಪ್ಪವನ್ನು ಸವರಿದ್ದಾರೆ ಎಂದರು.

ಮನೆಯಲ್ಲಿದ್ದ ಮಹಿಳೆಯನ್ನು ವಿವಸ್ತ್ರಗೂಳಿಸುವುದರ ಮೂಲಕ ಕಾನೂನು ಸುವ್ಯವಸ್ಥೆ ರಾಜ್ಯದಲ್ಲಿ ಹಾಳಾಗಿದೆ, ಇಲ್ಲಿ ಸರ್ಕಾರವೂ ಬದುಕಿಲ್ಲ, ಮಂತ್ರಿಯೂ ಸಹಾ ಬದುಕಿಲ್ಲ, ಕಾನೂನು ಸತ್ತು ಹೋಗಿದೆ. ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಹಣವನ್ನು ಲೂಟಿ ಮಾಡುತ್ತಿದೆ. ರಾಜ್ಯದಲ್ಲಿ ಮಹಿಳೆಯರಿಗೆ ರಕ್ಷಣ ಇಲ್ಲದಂತಾಗಿದೆ. ಹೆಣ್ಣು ಭ್ರೂಣ ಹತ್ಯೆಯಲ್ಲಿ ಸಣ್ಣದಾದ ಪ್ರಕರಣವೆಂಬಂತೆ ದಾಖಲು ಮಾಡಿ ಅವರಿಗೆ ಬೇಲು ಸಿಗುವಂತೆ ಮಾಡಲಾಗಿದೆ ಇದರಲ್ಲಿ ನಿಮ್ಮ ಪಾಲು ಸಹಾ ಇದೆ ಎಂದು ಕಾಂಗ್ರೆಸ್ ವಿರುದ್ದ ಕಿಡಿಕಾರಿ, ರಾಜ್ಯದಲ್ಲಿ ಬರ ತಾಂಡವಾಡುತ್ತಿದೆ ಭೂಮಿಗೆ ಹಾಕಿದ ಕಾಳು ಮಳೆ ಇಲ್ಲದೆ ಬೆಳೆ ಬರುತ್ತಿಲ್ಲ, ಸರಿಯಾದ ರೀತಿಯಲ್ಲಿ ವಿದ್ಯುತ್ ನೀಡಲಾಗುತ್ತಿಲ್ಲ, ಕಾಂಗ್ರೆಸ್ ದರಿದ್ರವನ್ನು ಹೊತ್ತು ಕೊಂಡು ಬಂದಿದೆ. ಸಿ.ಎಂ.ರವರು ಸುಳ್ಳು ಹೇಳುವುದರ ಮೂಲಕ ಮತದಾರರನ್ನು ಮೋಸ ಮಾಡುತ್ತಿದೆ, ದಲಿತರ ಉದ್ದಾರಕ್ಕಾಗಿ ಇಟ್ಟಿದ್ದ ಹಣವನ್ನು ಸರ್ಕಾರ ಬೇರೆ ರೀತಿಯಲ್ಲಿ ಉಪಯೋಗವನ್ನು ಮಾಡಿಕೊಂಡಿದ ಇದಕ್ಕಾಗಿ ದಲಿತರ ಹಣವನ್ನು ಉಪಯೋಗ ಮಾಡುವುದು ಸರಿಯಲ್ಲ ಎಂದರು.

ದಲಿತರ ಹಣವನ್ನು ಸರ್ಕಾರ ನುಂಗಿದರು ಕೂಡ ದಲಿತ ಸಂಘಟನೆಗಳು ಸುಮ್ಮನೆ ಇವೆ, ಇದ್ದಲ್ಲದೆ ದಲಿತ ಶಾಸಕರು, ಮಂತ್ರಿಗಳು ಸಹಾ ಸಮ್ಮನಿದ್ದಾರೆ, ಇದರ ಬಗ್ಗೆ ಹೋರಾಟವನ್ನು ಮಾಡಬೇಕಿದೆ. ಸಣ್ಣ ಪುಟ್ಟದಕ್ಕೆಲ್ಲಾ ಹೋರಾಟವನ್ನು ಮಾಡುವ ಸಂಘಟನೆಗಳು ಇದರ ಬಗ್ಗೆ ಮೌನವಹಿಸಿದೆ, ಸರ್ಕಾರ ತನ್ನ ಗ್ಯಾರೆಂಟಿಗಳಿಗಾಗಿ ದಲರಿತ ಹಣವನ್ನು ತೆಗೆದುಕೊಂಡಿದೆ ಇದರ ವಿರುದ್ದ ಹೋರಾಟವನ್ನು ಮಾಡಲಾಗುವುದೆಂದು ಛಲವಾದಿ ನಾರಾಯಣಸ್ವಾಮಿ ತಿಳಿಸಿದರು.ಮಾಜಿ ಶಾಸಕರಾದ ಜಿ.ಎಚ್. ತಿಪ್ಪಾರೆಡ್ಡಿ ಮಾತನಾಡಿ, ರಾಜ್ಯದಲ್ಲಿ ಆಡಳಿತವನ್ನು ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಪ್ರತಿಯೊಂದಕ್ಕೂ ಸಹಾ ಕೇಂದ್ರ ಸರ್ಕಾರದ ಕಡೆಗೆ ಕೈ ತೋರಿಸುತ್ತಿದೆ ಇದು ಸರಿಯಾದ ಕ್ರಮವಲ್ಲ ರಾಜ್ಯ ಸರ್ಕಾರ ತನ್ನ ಪಾಲಿನ ಕೆಲಸವನ್ನು ಮಾಡಬೇಕು ತದ ನಂತರ ಕೇಂದ್ರವನ್ನು ಕಾಯಬೇಕು ಆದರೆ ಇಲ್ಲ ಎಲ್ಲದಕ್ಕಿಂತ ಮುಂಚೆಯೇ ಕೇಂದ್ರ ನಮಗೆ ಏನು ಸಹಾಯ ಮಾಡಿಲ್ಲ ಎಂದು ದೂರುವುದು ಈ ಸರ್ಕಾರದ ಪದ್ದತಿಯಾಗಿದೆ ಎಂದು ಅವರು, ರಾಜ್ಯದಲ್ಲಿ ಮಹೀಲೆಯರ ಮೇಲೆ ದೌರ್ಜನ್ಯ ನಡೆಯುತ್ತಿದೆ ಇವರಿಗೆ ಸ್ವಾಂತಾನ ಹೇಳುವ ಕೆಲಸವನ್ನು ಸರ್ಕಾರ ಮಾಡಿಲ್ಲ, ರಾಜ್ಯದಲ್ಲಿ ಹೆಣ್ಣು ಭ್ರೂಣ ಹತ್ಯೆ ನಡೆಯುತ್ತಿದ್ದರು ಸಹಾ ಇದರ ಬಗ್ಗೆ ಸರ್ಕಾರ ಯಾವುದೆ ಕ್ರಮ ಕೈಗೊಂಡಿಲ್ಲ ಇದಕ್ಕೆ ಸರ್ಕಾರ ಇನ್ನೂ ಸಹಾಯವನ್ನು ಮಾಡುತ್ತಿದೆ ಎಂದು ದೂರಿದರು.

ರಾಜ್ಯದಲ್ಲಿ ಬಿಜೆಪಿ ಸರ್ಕಾರ ಇದ್ದಾಗ ಬರ ಬಂದಾಗ ರೈತರಿಗೆ ಸಹಾಯವನ್ನು ಕೇಂದ್ರವನ್ನು ಕಾಯದೇ ಮಾಡಲಾಗುತಿತ್ತು ಅದರ ಈಗ ಕಾಂಗ್ರೇಸ್ ಸರ್ಕಾರ ರೈತರ ನೆರವಿಗೆ ಬಾರದಿರುವುದು ದುರಂತವೇ ಸಹಾ ಸರ್ಕಾರ ಬಡವರಿಗೆ ಸಹಾಯವನ್ನು ಮಾಡದೇ ಕಾಲಹರಣವನ್ನು ಮಾಡುವುದರಲ್ಲಿ ನಿರತವಾಗಿದೆ, ದಲಿತರ ಹಣವನ್ನು ಬಳಕೆ ಮಾಡಿಕೊಂಡಿರುವ ಸರ್ಕಾರ ಇದರ ವಿರುದ್ದ ಸಂಘಟನೆಗಳು ಎಚ್ಚೆತ್ತುಕೊಂಡು ಹೋರಾಟವನ್ನು ಮಾಡಬೇಕಿದೆ ಎಂದು ಕರೆ ನೀಡಿದರು.

ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಹಲವಾರು ರೀತಿಯ ದೌರ್ಜನ್ಯಗಳು ಕೊಲೆಗಳಾಗಿದೆ ಇದರ ಬಗ್ಗೆ ಗೃಹ ಸಚಿವರನ್ನು ಪ್ರಶ್ನೆ ಮಾಡಿದಾಗ ಇದರ ಬಗ್ಗೆ ಉಡಾಫೆ ಮಾತನ್ನು ಹೇಳುವುದರ ಮೂಲಕ ಕಡಿಮೆ ಕೊಲೆಗಳಾಗಿವೆ ಎಂದು ಹೇಳುವುದರ ಮೂಲಕ ಜನರಿಗೆ ತಪ್ಪು ಮಾಹಿತಿಯನ್ನು ನೀಡಿದ್ದಾರೆ. ಬೆಳಗಾವಿ ಘಟನೆ ಎಲ್ಲರನ್ನು ತಲೆ ತಗ್ಗಿಸುವಂತೆ ಮಾಡಿದೆ ಇದರ ಬಗ್ಗೆ ಸರ್ಕಾರ ಯಾವುದೇ ಕ್ರಮವನ್ನು ತೆಗೆದುಕೊಂಡಿಲ್ಲ ಸಿ.ಎಂರವರು ಸಹಾ ಇದರ ಬಗ್ಗೆ ಹೇಳಿಕೆಯನ್ನು ನೀಡಿಲ್ಲ ಸಮಾಜದಲ್ಲಿ ವಿವಿಧ ರೀತಿಯ ಶೋಷಣೆಗಳು ನಡೆಯತ್ತಿವೆ ಇದರ ಬಗ್ಗೆ ಸರ್ಕಾರ ಯಾವುದೆ ಕ್ರಮವನ್ನು ತೆಗೆದುಕೊಂಡಿಲ್ಲ ಎಂದು ದೂರಿದರು.

ಈ ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷರಾದ ಎ.ಮುರಳಿ, ನಗರಾಭೀವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಸುರೇಶ್ ಸಿದ್ದಾಪುರ, ಸಂಪತ್ ಕುಮಾರ್, ನರೇಂದ್ರ, ನವೀನ್ ಚಾಲುಕ್ಯ, ಮಾಧುರಿ ಗೀರೀಶ್ ಕೆ.ಮಲ್ಲಿಕಾರ್ಜನ್,ವೆಂಕಟೇಶ್,ಯಾದವ್, ನಾಗರಾಜು, ಬೇದ್ರೇ, ದಗ್ಗೆ ಶಿವಪ್ರಕಾಶ್, ತಿಪ್ಪೇಸ್ವಾಮಿ, ಪಾಂಡುರಂಗಪ್ಪ, ಭಾರ್ಗವಿ ದ್ರಾವಿಡ್, ಶಾಂತಮ್ಮ, ರಜನಿ, ಕಾಂಚನ, ಬಸಮ್ಮ, ನಾಗರಾಜ್ ಕಿರಣ್, ಯಶವಂತ, ಪರಶುರಾಂ. ರಾಮದಾಸ್, ಸೇರಿದಂತೆ ಇತರರು ಭಾಗವಹಿಸಿದ್ದರು.

## ಗ್ರಾಮೀಣ ಭಾಗದ ಶೈಕ್ಷಣಿಕ ಅಭಿವೃದ್ದಿಗೆ ಸಂಘ, ಸಂಸ್ಥೆ ನೀಡುತ್ತಿರುವ ಕೊಡುಗೆ ಅಪಾರ: ಕೆ.ಎಸ್.ಸುರೇಶ್



» **ಚಳ್ಳಕೆರೆ**

ಗ್ರಾಮೀಣ ಭಾಗದ ಶಾಲೆಯ ವಿದ್ಯಾರ್ಥಿಗಳು ಸಹ ಕಲಿಕೆಯಲ್ಲಿ ಹೆಚ್ಚು ಆಸಕ್ತಿ ತೋರಬೇಕಿದೆ. ಸರ್ಕಾರ ಹಲವಾರು ಸೌಲಭ್ಯಗಳನ್ನು ವಿದ್ಯಾರ್ಥಿಗಳಿಗೆ ನೀಡಿ ಅವರ ಶೈಕ್ಷಣಿಕ ಪ್ರಗತಿಗೆ ಉತ್ತಮ ಸಹಕಾರ ನೀಡುತ್ತಿದೆ. ಸಾರ್ವಜನಿಕ ಸಂಘ ಸಂಸ್ಥೆ ವಿವಿಧ ಕೊಡುಗೆ ನೀಡುವ ಮೂಲಕ ವಿದ್ಯಾರ್ಥಿಗಳಲ್ಲಿ ಶಿಕ್ಷಣ ಕಲಿಕೆ ಬಗ್ಗೆ ಆಸಕ್ತಿ ಮೂಡಿಸುತಿರುವುದು ಸಂತಸ ವಿಷಯವೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ತಾಲ್ಲೂಕಿನ ಹಿರೇಹಳ್ಳಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಶನಿವಾರ ಗುಂಜ್ ಖಾಸಗಿ ಎನ್‌ಜಿಓ ಸಂಸ್ಥೆ ಶಾಲೆಯ ಸುಮಾರು 405ಕ್ಕೂ ಹೆಚ್ಚು ಮಕ್ಕಳಿಗೆ ಶಾಲೆ ಬ್ಯಾಗ್, ನೋಟ್‌ಬುಕ್ ಉಚಿತ ನೀಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಸರ್ಕಾರಿ ಶಾಲೆಯ ಮಕ್ಕಳಶೈಕ್ಷಣಿಕ ಪ್ರಗತಿಯ ಬಗ್ಗೆ ಸಾರ್ವಜನಿಕರಲ್ಲಿ ಕುತೂಹಲ ಮೂಡುತ್ತಿದೆ. ಈ ನಿಟ್ಟಿನಲ್ಲಿ ನಾವೆಲ್ಲರೂ ಸೇರಿ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಬೇಕಿದೆ. ಹೆಚ್ಚು ವಿದ್ಯಾರ್ಥಿಗಳು ಉನ್ನತ್ತ ದರ್ಜೆಯಲ್ಲಿ ಉತ್ತೀರ್ಣರಾಗಿ ಶಾಲೆಗೆ ಗ್ರಾಮಕ್ಕೆ ಕೀರ್ತಿತರುವಂತೆ ಮನವಿ ಮಾಡಿದರು.

ಹಿರೇಹಳ್ಳಿ ಸಿಆರ್‌ಪಿ ಎನ್.ಮಾರಣ್ಣ ಪ್ರಾಸ್ತಾವಿಕವಾಗಿ ಮಾತನಾಡಿ, ಬೆಂಗಳೂರಿನ ಗುಂಜ್ ಎನ್‌ಜಿಓ ಸಂಸ್ಥೆ ನಮ್ಮ ಶಾಲಾ ಮಕ್ಕಳಿಗೆ ಉಚಿತವಾಗಿ ಬ್ಯಾಗ್, ನೋಟ್ ಪುಸ್ತಕ ನೀಡಿದೆ. ವಿದ್ಯಾರ್ಥಿಗಳ ಮುಖದಲ್ಲಿ ಮಂದಹಾಸ ಮೂಡಿದೆ. ಎಲ್ಲಾ ವಿದ್ಯಾರ್ಥಿಗಳು ಶಿಕ್ಷಣವನ್ನು ಸರಿಯಾದ ರೀತಿಯಲ್ಲಿ ಅರ್ಥೈಸಿಕೊಳ್ಳಬೇಕು. ಶಾಲೆಯ ಪರವಾಗಿ ಗುಂಜ್ ಕಂಪನಿಯವರಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ಸಂಸ್ಥೆಯ ಅಧಿಕಾರಿ ಶಾಲಿನ್ ಮಾತನಾಡಿ, ಗ್ರಾಮೀಣ ಭಾಗದಲ್ಲಿ ವಿದ್ಯಾರ್ಥಿಗಳು ಹಲವಾರು ಸೌಲಭ್ಯಗಳಿಂದ ವಂಚಿತರಾಗುತ್ತಾರೆ. ಕೆಲವೊಂದು ಸೌಲಭ್ಯಗಳು ಸರ್ಕಾರ ನೀಡಿದರೂ ವಿದ್ಯಾರ್ಥಿಗಳು ಅವಶ್ಯಕವಾಗಿ ಬ್ಯಾಗ್, ನೋಟ್‌ಪುಸ್ತಕ ಮುಂತಾದವುಗಳನ್ನು ಸಕಾಲದಲ್ಲಿ ಪಡೆಯಲು ಸಾಧ್ಯವಾಗುವುದಿಲ್ಲ. ಸರ್ಕಾರಿ ಶಾಲೆಗೆ ಬರುವ ವಿದ್ಯಾರ್ಥಿಗಳಿಗೆ ಆತ್ಮವಿಶ್ವಾಸ ತುಂಬುವ ನಿಟ್ಟಿನಲ್ಲಿ ನಮ್ಮ ಸಂಸ್ಥೆ ಈ ಕಾರ್ಯವನ್ನು ಹಲವಾರು ವರ್ಷಗಳಿಂದ ಮಾಡುತ್ತಾ ಬಂದಿದೆ ಎಂದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಪದಾಧಿಕಾರಿಯಾದ ಇಂತಿಯಾಜ್, ತಿಮ್ಮೇಶ್, ನಟರಾಜು, ಸಂಪನ್ಮೂಲ ವ್ಯಕ್ತಿ ಪ್ರಸನ್ನ, ಶಿಕ್ಷಕರಾದ ನಾಗರಾಜು, ಸೂರಣ್ಣ, ಮಂಜುನಾಥ, ರೂಪ, ನಾಗಮ್ಮ, ಕಲ್ಪನಾ, ತಿಪ್ಪಮ್ಮ, ಪರಿದಾಭಾನು, ಮಮತ, ಸುಜಾತ, ನಲಿಕಲಿ ಶಿಕ್ಷಕ ನಿರ್ಮಲಮ್ಮ, ರಾಜೇಶ್ವರಿ, ಮಂಜುಶ್ರೀ, ಹರೀಶ್‌ಕುಮಾರ್, ಬಸವನಗೌಡ, ಬಸವರಾಜು ಉಪಸ್ಥಿತರಿದ್ದರು.

## ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ದಾಳಿ



» **ಚಿತ್ರದುರ್ಗ**

ಜಿಲ್ಲೆಯಲ್ಲಿ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಕೋಟ್ಪಾ–2003ರ ಕಾಯ್ದೆಯ ಕುರಿತು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಚಿತ್ರದುರ್ಗ ತಾಲ್ಲೂಕಿನ ನಗರ ಪ್ರದೇಶಗಳಲ್ಲಿ ಜಿಲ್ಲಾ ಮಟ್ಟದ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ಭೇಟಿ ನೀಡಿ, ಕಾಯ್ದೆ ಉಲ್ಲಂಘನೆಗೆ ಸಂಬಂಧಿಸಿದಂತೆ ಪ್ರಕರಣ ದಾಖಲಿಸಿ ದಂಡ ವಿಧಿಸಿದೆ. ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ, ಪಾನ್ ಮಸಾಲ, ತಂಬಾಕು ಜಗಿದು ಎಲ್ಲೆಂದರಲ್ಲಿ ಉಗಿಯದಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ, ತಂಬಾಕು ನಿಯಂತ್ರಣ ಕಾಯ್ದೆ ಪಾಲಿಸುವಂತೆ ಅಂಗಡಿಗಳ ಮಾಲೀಕರಿಗೆ ಎಚ್ಚರಿಕೆ ನೀಡಲಾಯಿತು. ಕೋಟ್ಪಾ ಕಾಯ್ದೆ ಉಲ್ಲಂಘನೆಗೆ ಸಂಬಂಧಿಸಿದಂತೆ ಒಟ್ಟು 19 ಪ್ರಕರಣಗಳನ್ನು ದಾಖಲಿಸಿ, ರೂ.2000 ದಂಡ ವಿಧಿಸಲಾಯಿತು. ತಂಬಾಕು ದಾಳಿಯಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಗಿರೀಶ್, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ. ಪ್ರಭುದೇವ್, ಆರೋಗ್ಯ ನಿರೀಕ್ಷಣಾಧಿಕಾರಿ ಜಿ.ಕೆ.ಪ್ರವೀಣ್ ಇದ್ದರು.

**ಪ್ರಮುಖ ಸುದ್ದಿ**

# ಶೀಘ್ರ ಸುಸಜ್ಜಿತ ಕ್ರೀಡಾಂಗಣ ನಿರ್ಮಾಣ: ಶಾಸಕ ರಘುಮೂರ್ತಿ





» **ಚಳ್ಳಕೆರೆ**

ಕರ್ನಾಟಕ ರಾಜ್ಯದ ಇತಿಹಾಸದಲ್ಲಿ ಚಳ್ಳಕೆರೆ ತಾಲ್ಲೂಕು ತನ್ನದೇಯಾದ ವಿಶೇಷತೆ ಹೊಂದಿದೆ ಎಂದು ತಿಳಿಸಲು ಸಂತೋಷವಾಗುತ್ತದೆ. ವಾಣಿಜ್ಯ, ವ್ಯವಸಾಯ, ಸಾಹಿತ್ಯ ಹಾಗೂ ಕ್ರೀಡೆಯಲ್ಲಿ ತಾಲ್ಲೂಕಿನ ಹಿರಿಮೆಯನ್ನು ಯಾರೂ ಅಲ್ಲಗೆಳೆಯುವಂತಿಲ್ಲ. ಈ ಭಾಗದ ಕ್ರೀಡಾಪಟುಗಳು ಸರ್ವತೋಮುಖ ಅಭಿವೃದ್ದಿಗಾಗಿ ಪಾವಗಡ ರಸ್ತೆಯಲ್ಲಿ ಸುಸಜ್ಜಿತ ನೂತನ ಕ್ರೀಡಾಂಗಣವನ್ನು ಶೀಘ್ರದಲ್ಲೇ ನಿರ್ಮಿಸುವ ಮೂಲಕ ಕ್ರೀಡೆಗೆ ಹೆಚ್ಚಿನ ಉತ್ತೇಜನ ನೀಡುತ್ತೇನೆಂಬ ಭರವಸೆಯನ್ನು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ನೀಡಿದರು.

ಅವರು, ಶನಿವಾರ ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ವಾಲಿಬಾಲ್ ಟೌನ್ ಯೂತ್ ಕ್ಲಬ್ ಹಮ್ಮಿಕೊಂಡಿದ್ದ ನಾಲ್ಕನೇ ಬಾರಿಗೆ ಅಂತರರಾಜ್ಯಮಟ್ಟದ ಆಹ್ವಾನಿತ ಪುರುಷರ ಹೊನಲು, ಬೆಳಕಿನ ಪಂದ್ಯಾವಳಿಯನ್ನು ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ, ನಂತರ ವಾಲಿಬಾಲ್ ಸರ್ವ ಮಾಡುವ ಮೂಲಕ ಕ್ರೀಡೆಗೆ ಚಾಲನೆ ನೀಡಿದರು. ಪ್ರಸ್ತುತ ಈ ಕ್ರೀಡೆಗೆ ಕರ್ನಾಟಕ, ತಮಿಳುನಾಡು, ಕೇರಳ, ಆಂಧ್ರಪ್ರದೇಶ ಸೇರಿದಂತೆ ವಿವಿಧ ರಾಜ್ಯದ ಕ್ರೀಡಾಪಟುಗಳು ಆಗಮಿಸಿರುವುದು ಸಂತೋಷವಾಗಿದೆ. ಇದರಿಂದ ಚಳ್ಳಕೆರೆಯ ಕ್ರೀಡಾ ಕ್ಷೇತ್ರ ತನ್ನದೇಯಾದ ವಿಶೇಷತೆಯನ್ನು ಹೊಂದಿದೆ ಎಂಬುವುದು ಇದರಿಂದ ತಿಳಿಯುತ್ತದೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಸಾಧನೆಯತ್ತ ನಾವೆಲ್ಲರೂ ಹೆಜ್ಜೆ ಇಡಬೇಕು. ನಿಮ್ಮೆಲ್ಲರ ಸಹಕಾರ ಕ್ರೀಡಾ ಕ್ಷೇತ್ರಕ್ಕೆ ಹೆಚ್ಚು ಸಿಗಲಿ ಎಂದು ಆಶಿಸುತ್ತೇನೆ. ಇಂತಹ ಪಂದ್ಯಾವನ್ನು ಏರ್ಪಡಿಸಿದ ವಾಲಿಬಾಲ್ ಯೂತ್‌ಕ್ಲಬ್‌ನ ಎಲ್ಲಾ ಪದಾಧಿಕಾರಿಗಳು, ಹಿರಿಯ ಆಟಗಾರರು, ಕ್ರೀಡಾಪ್ರೇಮಿಗಳನ್ನು ಅಭಿನಂದಿಸುವುದಾಗಿ ತಿಳಿಸಿದರು.

ದಾವಣಗೆರೆ ನಗರ ಪಾಲಿಗೆ ಸದಸ್ಯ ಹಾಗೂ ಹಿರಿಯ ಆಟಗಾರ ನಾಗರಾಜು ಮಾತನಾಡಿ, ಕ್ರೀಡಾ ಕ್ಷೇತ್ರದಲ್ಲಿ ಚಳ್ಳಕೆರೆ ತಾಲ್ಲೂಕಿನ ಸಾಧನೆ ಉತ್ತಮವಾಗಿದೆ. ಕಳೆದ ಹಲವಾರು ದಶಕಗಳಿಂದ ಈ ನೆಲದಲ್ಲಿ ರಾಜ್ಯ, ಅಂತರಾಜ್ಯಮಟ್ಟದ ಹಲವಾರು ಪಂದ್ಯಗಳು ನಡೆದಿವೆ. ಕ್ರೀಡೆಗಳಿಗೆ ಹೆಚ್ಚಿನ ಪ್ರೋತ್ಸಾಹ ಇಲ್ಲಿನ ಕ್ರೀಡಾಭಿಮಾನಿಗಳಿಂದ ಸಿಗುತ್ತಿರುವುದು ಸಂತಸತಂದಿದೆ ಎಂದರು.

ಕಾರ್ಯಕ್ರಮಕ್ಕೆ ಆಗಮಿಸಿದ ಸರ್ವರನ್ನೂ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದ ಟೌನ್‌ಯೂತ್ ಕ್ಲಬ್‌ನ ಗೌರವಾಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ನಾಲ್ಕನೇ ಬಾರಿಗೆ ಈ ಪಂದ್ಯವನ್ನು ಹಮ್ಮಿಕೊಳ್ಳಲು ನಮಗೆ ಎಲ್ಲರಿಂದಲೂ ಉತ್ತಮ ಉತ್ತೇಜನ ಸಿಕ್ಕಿದೆ. ಕ್ರೀಡೆ ನಾವೆಲ್ಲರೂ ಬಯಸುವ ಅತ್ಯುತ್ತಮ ಆಟವಾಗಿದ್ದು ಕ್ರೀಡೆಯಿಂದ ಎಲ್ಲವನ್ನೂ ಪಡೆಯಲು ಸಾಧ್ಯ. ಚಳ್ಳಕೆರೆ ಕ್ರೀಡಾಪಟುಗಳು ದೇಶವಿದೇಶಗಳಲ್ಲೂ ಖ್ಯಾತಿಗಳಿಸಿದ್ದು ಇದು ಚಳ್ಳಕೆರೆಯ ಹೆಮ್ಮೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಧ್ಯಕ್ಷ ಎನ್.ಚಂದ್ರಶೇಖರ್ ವಹಿಸಿದ್ದರು. ಕಾರ್ಯಕ್ರಮದಲ್ಲಿ ಸುಧಾಶ್ರೀನಿವಾಸ್, ಕಾರ್ತಿಕ್, ಪಾಪಣ್ಣ, ಸಿ.ಒ.ರವಿಕುಮಾರ್, ಬಾಬುರೆಡ್ಡಿ,ಜಿ.ಎ.ಪ್ರಕಾಶ್,ನಾಗೇಶ್‌ಬಾಬು, ಮಾರುತಿ, ಕೆ.ಸೂರನಾಯಕ, ಆರ್.ಪ್ರಸನ್ನಕುಮಾರ್, ಕಾರ್ಯದರ್ಶಿ ಎಂ.ಮಹಮ್ಮದ್ ಆಯೂಬ್, ಖಜಾಂಚಿ ಡಿ.ಸಿದ್ದು, ಎಲ್.ಪ್ರಶಾಂತ್, ಚಿನ್ನ, ರಾಜೇಶ್, ಸುದರ್ಶನ್‌ರೆಡ್ಡಿ, ಕಾಂಗ್ರೆಸ್ ಮುಖಂಡರಾದ ಚನ್ನಕೇಶವ, ಕೃಷ್ಣಮೂರ್ತಿ, ಎನ್. ಮಂಜುನಾಥ, ಎಂ.ಚೇತನ್‌ಕುಮಾರ್, ಮುಂತಾದವರು ಭಾಗವಹಿಸಿದ್ದರು.

# ಅಂಬೇಡ್ಕರ್ ಅಲೋಚನೆಗಳು ದಾರಿದೀಪ

» ಚಿತ್ರದುರ್ಗ

ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ನಿರ್ಲಕ್ಷ್ಯ ಮಾಡಲಾಗಿದೆ ಎಂಬ ವಾದವು ಹಾಗಾಗ ನಡೆಯುತ್ತದೆ. ಅಂಬೇಡ್ಕರ್ ಇಲ್ಲದ ಯಾವ ಬದಲಾವಣೆ ತರಲು ಸಾಧ್ಯವಿಲ್ಲ ಈ ನೆಲದಲ್ಲಿ ಎಂಬ ಚರ್ಚೆಗಳು ಶೈಕ್ಷಣಿಕ, ಹೋರಾಟದ ವಲಯದಲ್ಲಿ ನಡೆಯುತ್ತಿವೆ. ಆದರೆ ಶೈಕ್ಷಣಿಕ ವಲಯದ ಅಧ್ಯಯನಗಳೇ ಹೆಚ್ಚು ತೆರೆದುಕೊಂಡವು. ಚಳವಳಿಗಳು ದೊಡ್ಡಮಟ್ಟದಲ್ಲಿ ಇದ್ದಾಗಲೂ ಅಷ್ಟೊಂದು ತಲೆ ಕೆಡಿಸಿಕೊಂಡಿಲ್ಲ. ಹೊಸ ಹೊಸ ಸಾಮಾಜಿಕ ವಿಜ್ಞಾನಗಳಲ್ಲಿ ಆದಂತಹ ಸಂಶೋಧನೆ, ಚರ್ಚೆಗಳು, ವಾಗ್ವಾದಗಳು ಮತ್ತು ಭಾರತದ ಸಂದರ್ಭದಲ್ಲಿ ಉಂಟಾದ ಸಾಮಾಜಿಕ ಬಿಕ್ಕಟ್ಟುಗಳು ಪ್ರಜಾ ತಾಂತ್ರಿಕ ಬಿಕ್ಕಟ್ಟುಗಳು ಅದರ ನಿವಾರಣೆ ಮಾರ್ಗಗಳ ಏನು ಎಂದು ಹುಡುಕಲು ಹೋರಾಟದ ಅಂಬೇಡ್ಕರ್ ಅಲೋಚನೆಗಳು ದೊಡ್ಡ ದಾರಿದೀಪ ಅನಿಸಿವೆ ಎಂದು ಹಿರಿಯ ಪತ್ರಕರ್ತ ಮೇ.ನಾ. ಅಹೋಬಳಪತಿ ತಿಳಿಸಿದರು.

ನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಶುಕ್ರವಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಬಾಲಕರ ಪದವಿ ಪೂರ್ವ ಕಾಲೇಜು ಆಯೋಜಿಸಿದ್ದ ಅಂಬೇಡ್ಕರ್ ಓದು ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅಂಬೇಡ್ಕರ್ ವಿಚಾರಗಳನ್ನು ಈಗ ಹೆಚ್ಚೆಚ್ಚು ಮುನ್ನೆಲೆಗೆ ತೆಗೆದುಕೊಳ್ಳುವ ಪ್ರಯತ್ನಗಳು ನಡೆದವು. ಒಂದುವರೆ ದಶಕದಲ್ಲಂತೂ ತುಂಬಾ ಪರಿಣಾಮಕಾರಿಯಾಗಿ ನಡೆದಿವೆ ಎಂದು ಹೇಳಿದರು. ಬೇರೆ ಬೇರೆ ದೇಶಗಳಲ್ಲಿ ಯುಗ ಪ್ರವರ್ತಕರನ್ನು ನೋಡುತ್ತೇವೆ. ರಷ್ಯಾ, ಲೆನಿನ್, ಚೈನಾ, ಮಾವೋ, ಸ್ಟಾಲಿನ್ ಈ ರೀತಿ ದೊಡ್ಡ ದೊಡ್ಡ ಪ್ರವರ್ತಕರನ್ನು ನೋಡುತ್ತೇವೆ. ಭಾರತದ ಮಟ್ಟಿಗೆ ದೊಡ್ಡಪಟ್ಟಿಯೇ ಇದೆ. ಆದರೆ, ನಿಜವಾದ ಅರ್ಥದಲ್ಲಿ ಭಾರತೀಯ ಸಮಾಜದಲ್ಲಿ ಆಧುನಿಕ ಯುಗ ಪ್ರವರ್ತಕನೆಂದು ಪರಿಗಣಿಸುವುದಾದರೆ ಅದು ಅಂಬೇಡ್ಕರ್ ಮಾತ್ರ. ಎಂದು ತಿಳಿಸಿದರು. ಬ್ರಿಟಿಷ್ ಆರ್ಥಿಕತೆ ಕುರಿತು ಕೊಲಂಬಿಯ ವಿ.ವಿ.ಯಲ್ಲಿ 1916 ರಲ್ಲಿ ಪ್ರಬಂಧ ಮಂಡಿಸಿದರು. 1956ರ ತನಕ 4 ದಶಕಗಳ ಕಾಲ ಯಾರಾದರೂ ಒಬ್ಬ ವ್ಯಕ್ತಿ ಅಧ್ಯಯನ, ಸಂಘರ್ಷ, ಸಂಘಟನೆ, ಹೋರಾಟ, ಸಾಮಾಜಿಕ ಸವಾಲುಗಳೆಲ್ಲವನ್ನು ಸ್ವೀಕರಿಸಿ ಅವಿಶ್ರಾಂತ ಯೋಧನ ರೀತಿಯಲ್ಲಿ ಸಾರ್ವಜನಿಕ ಜೀವನಕ್ಕೆ ಮಹತ್ವವಾದ ಕೊಡುಗೆಯನ್ನು ಕೊಟ್ಟಿದ್ದಾರೆ. ಅಂತಹ ಒಂದು ಆಂತಃಶಕ್ತಿಯನ್ನು ನೋವಿನ, ಅನುಮಾನದ ಕುಲುಮೆಯಲ್ಲೇ ಪಡೆದುಕೊಂಡು ಪುಟಿದೆದ್ದವರು ಅಂಬೇಡ್ಕರ್. ಪಠ್ಯಪುಸ್ತಕ, ಸ್ವಾತಂತ್ರ □□ ಹೋರಾಟದ ಚರಿತ್ರೆಯನ್ನು ಸಮಾಜಶಾಸ್ತ್ರವನ್ನು ಓದುವಾಗ ಇಂತಹದೊಂದು ವ್ಯಕ್ತಿತ್ವ ಇದ್ದು ಎಂದು ನೊಂದಣಿಯಾಗುವುದಿಲ್ಲ. ಅದೊಂದು ಸಣ್ಣ ಕತೆಯಾಗಿ ಅಂಬೇಡ್ಕರ್‌ರವರ ಜೀವನಗಾಥೆ ನಮ್ಮ ನೆನಪಿನಲ್ಲಿ ಉಳಿಯುವಷ್ಟಿದೆ. ಅದು ಬದಲಾಗಬೇಕು, ಅಂಬೇಡ್ಕರ್ ಓದು ಕಾರ್ಯಕ್ರಮ ಅಂತಹ ಕೊರತೆಯನ್ನು ನೀಗಿಸುವ ಪ್ರಮುಖಪಾತ್ರ ವಹಿಸುತ್ತದೆ ಎಂದು ತಿಳಿಸಿದರು.



ಅಂಬೇಡ್ಕರ್ ಬಗ್ಗೆ ತಿಳಿಯುವ ದೊಡ್ಡ ಜ್ಞಾನವಿದೆ. ಅದು ಸ್ಪರ್ಧಾತ್ಮಕ ಪರೀಕ್ಷೆಗೆ ತಯಾರಿಯಂತಲ್ಲ. ನೀವು ಆಧುನಿಕ ಸಮಾಜದಲ್ಲಿ ಪರಿಪೂರ್ಣ ವ್ಯಕ್ತಿಯಾಗಿ ಇನ್ನೊಬ್ಬರ ಪ್ರಜಾ ತಾಂತ್ರಿಕ ಇರುವಿಕೆಯನ್ನು, ಇನ್ನೊಬ್ಬರ ಪ್ರಜಾತಾಂತ್ರಿಕ ಆಗುಹೋಗುವಿಕೆಯನ್ನು, ಗೌರವಿಸಿ ಹೇಗೆ ಪ್ರಜಾತಾಂತ್ರಿಕವಾಗಿ ನಡೆದುಕೊಳ್ಳಬೇಕು ಎಂದುಕೊಂಡರೆ ನೀವು ಅಂಬೇಡ್ಕರ್‌ನ್ನು ಓದಿಕೊಳ್ಳಲೇಬೇಕು. ವಿದ್ಯಾರ್ಥಿಗಳಾದ ನೀವು ಮುಂದೆ ಸಮಾಜ ವಿಜ್ಞಾನಿಯಾಗಿ, ವಕೀಲರಾಗಿ, ರಾಜಕಾರಣಿಯಾಗುತ್ತಿರೋ ಗೊತ್ತಿಲ್ಲ. ನೀವು ಏನೇ ಆಗಬೇಕು, ನೀವು ಪರಿಪೂರ್ಣರಾಗಬೇಕು ಎಂದರೆ ನೀವು ಅಂಬೇಡ್ಕರ್‌ನ್ನು ಓದಲೇಬೇಕು. ಅಂಬೇಡ್ಕರ್ ಜ್ಞಾನದ ಗಣಿ, ಸಮಾಜದ ಚೇತನ ಎಂದು ಗ್ರಹಿಸಬೇಕು ಎಂದು ಹೇಳಿದರು. ಅಂಬೇಡ್ಕರ್‌ರವರು ವ್ಯಕ್ತಿ ಪೂಜೆ ಸಲ್ಲದು ಎಂದಿದ್ದಾರೆ. ಆದರೆ ಭಾರತ ಸ್ವಾತಂತ್ರ □□ದ ನಂತರ ಕೆಲವೇ ದಿನಗಳಲ್ಲಿ ಇಂದಿರಾಗಾಂಧಿಯಂತಹ ಪ್ರಧಾನಿ ವ್ಯಕ್ತಿ ಪೂಜೆ ಶುರುವಾಯಿತು. ಅದು ತುರ್ತು ಪರಿಸ್ಥಿತಿಯಂತಹ ಅತಿರೇಕಕ್ಕೆ ಕರೆದುಕೊಂಡು ಹೋಗುವಂತಹ ಸನ್ನಿವೇಶ ನಿರ್ಮಾಣಮಾಡಿತು. ಇವತ್ತು ಕೂಡ ಅಂತಹ ವ್ಯಕ್ತಿ ಪೂಜೆಯ ಅತಿರೇಕಕ್ಕೆ ಹೋಗಿದೆ. ಪ್ರಜಾತಾಂತ್ರಿಕ ಆಶಯಗಳು, ನೆಲೆಗಳು ಅದರ ವಿಸ್ತೃತತೆ ಬದಿಗಿಟ್ಟು ಯಾರೋ ಅವತಾರ ಪುರುಷ ನಮ್ಮ ದೇಶವನ್ನು ರಕ್ಷಣೆ ಮಾಡುತ್ತಿದ್ದಾರೆ ಎಂಬ ಮಧ್ಯಯುಗೀಯ ಮೌಢ್ಯದ ಅರೆಉಳಿಗಮಾನ್ಯ ಪರಿಸ್ಥಿತಿಗೆ ನಮ್ಮನ್ನು ಕೊಂಡೊಯ್ಯುವ ಪ್ರಯತ್ನಗಳು ನಡೆಯುತ್ತಿವೆ ಎಂದು ವಿಷಾದಿಸಿದರು.

ಒಂದು ದೇಶ ಜನಾಂಗೀಯ, ಭಾಷಿಕ, ಜಾತಿಯ, ಧಾರ್ಮಿಕ ಪೂರ್ವಗ್ರಹದಲ್ಲಿ ಯಾವುದೇ ದೇಶ ಭವಿಷ್ಯಕಟ್ಟಿಕೊಳ್ಳಲು ಆಗುವುದಿಲ್ಲ. ಇದನ್ನು ಅಂಬೇಡ್ಕರ್ ಪ್ರಾನ್ಸ ಮಹಾಕ್ರಾಂತಿಯ ಘೋಷಣೆಗಳಾದ ಸ್ವತಂತ್ರ □□, ಸಮಾನತೆ, ಸಹೋದರತ್ವ ಅಂದರೆ 17ನೇ ಶತಮಾನದಲ್ಲಿ ನಡೆದಂತಹ ಪ್ರಾನ್ಸ್ ಕ್ರಾಂತಿಯ ಅಂತಃಸ್ಪೂರ್ತಿ ಆಶಯವನ್ನು ಎತ್ತಿ ಹಿಡಿದು ಅದನ್ನು ನಮ್ಮ ಸಂವಿಧಾನದಲ್ಲೆ ಅಳವಡಿಸಿದ್ದಾರೆ. ಸಂವಿಧಾನ ಹಸ್ತಾಂತರಿಸುವಾಗ ಉಲ್ಲೇಖಿಸುತ್ತಾರೆ. ಎಲ್ಲಾ ಪೂರ್ವಗ್ರಹಗಳಿಗೆ ಅತೀತವಾದ ಪ್ರಜಾತಾಂತ್ರಿಕ ಸಮಾಜವಾದಿ ದೇಶ ನನ್ನ ಕನಸು ಎಂಬುವುದು ಅಂಬೇಡ್ಕರ್‌ರವರ ಆಶಯವಾಗಿತ್ತು ಎಂದು ತಿಳಿಸಿದರು.

ಉಪನ್ಯಾಸಕ ಡಾ.ಕೃಷ್ಣಪ್ಪ.ಬಿ. ಮಾತನಾಡಿ ಡಾ.ಬಿ.ಆರ್. ಅಂಬೇಡ್ಕರ್‌ರವರು ಆಧುನಿಕ ಭಾರತದಲ್ಲಿ ತಮ್ಮದೇ ಆದಂತಹ ಛಾಪೂವನ್ನು ಮೂಡಿಸಿದ್ದಾರೆ. ಕಬೀರ ಪಂಥ, ಬುದ್ಧನ ಚರಿತೆ ಪುಸ್ತಕ, ಜ್ಯೋತಿ ಬಾ ಪುಲೆ ಈ ಮೂರು ಅಂಶಗಳು ಅವರಿಗೆ ಪ್ರಭಾವಿತವಾಗಿದ್ದವು ಎಂದು ಹೇಳಿದರು.

ಮಹಾರಾಷ್ಟ್ರದಲ್ಲಿ ಕಬೀರ ಪಂಥ್ ಬಹಳ ಜನಪ್ರಿಯವಾಗಿತ್ತು. ಅಸಮಾನತೆಯನ್ನು ಅಳಸಿ ಸಮಾನತೆಯನ್ನು ತೋರುವುದು ಹಾಗೆ ಕಾರ್ಯಕ್ರಮವೊಂದರಲ್ಲಿ ಬುದ್ಧನ ಚರಿತ್ರೆಯ ಕೃತಿಯನ್ನು ನೀಡಿದ್ದು ಆ ಕೃತಿ ಓದಿ ಅವರಿಗೆ ಪ್ರೇರಣೆಯಾಗಿದ್ದು, ಮುಂದೆ ಬೌದ್ಧ ಧರ್ಮಕ್ಕೆ ಮತಾಂತರ ಹೊಂದಿದರು. ಹಾಗೆಯೇ ಜೋತಿ ಬಾ ಪುಲೆಯವರು ಮಹಿಳೆಯರ ಸಮಾನತೆಗಾಗಿ ಶ್ರಮ ಪಡುತ್ತಿರುವುದು ಸತ್ಯಶೋಧನಾ ಚಳುವಳಿಯಿಂದ ಪ್ರೇರಣೆ ಪಡೆದರು ಎಂದು ಹೇಳಿದರು.

ಅಂಬೇಡ್ಕರ್‌ರವರು ಇಚ್ಛಾಶಕ್ತಿಯಿಂದ ಅಭ್ಯಾಸಮಾಡಿದ್ದಾರೆ. ಹಾಗಾಗಿ ಅವರು ಎಲ್ಲರ ಮನಸ್ಸಿನಲ್ಲಿ ಉಳಿದಿದ್ದಾರೆ. ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡಿದ್ದರು. ಎಲ್ಲಾ ದೇಶದ ಸಂವಿಧಾನವನ್ನು ಅಧ್ಯಯನಮಾಡಿದ್ದರಿಂದ ನಮಗೆ ಅಮೂಲ್ಯವಾದ ಸಂವಿಧಾನವನ್ನು ನೀಡಲು ಸಾಧ್ಯವಾಯಿತು. ಅವರಿಗೆ ಇನ್ನು ಬರೆಯಬೇಕಿತ್ತು, ಇನ್ನು ಹೇಳಬೇಕಿತ್ತು ಎಂಬುವ ಹಸಿನದಾಹ ಅವರಲ್ಲಿತ್ತು. ನಾನು ಪಟ್ಟಂತಹ ಕಷ್ಟ ಇಂದಿನವರು ಪಡಬಾರದೆಂದು ದೂರದೃಷ್ಟಿ ಅವರಿಗಿತ್ತು. ಎಲ್ಲಾ ರೀತಿಯ ಸಮಾನತೆಯನ್ನು ನೀಡಿದ್ದಾರೆ ಎಂದು ತಿಳಿಸಿದರು.

ಪ್ರಸ್ತಾವಿಕವಾಗಿ ಡಾ.ಬಿ.ಎಂ.ಗುರುನಾಥ್ ಮಾತನಾಡಿದರು. ವೇದಿಕೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಪುಟ್ಟಸ್ವಾಮಿ, ಪ್ರಾಂಶುಪಾಲರಾದ ಹೆಚ್. ಪಿ. ನರಸಿಂಹಮೂರ್ತಿ, ಉಪನ್ಯಾಸಕರಾದ ಮೋಹನ್, ಶ್ರೀಮತಿ ಚಂಪಕಲಾ, ಶ್ರೀನಿವಾಸ, ದೊಡ್ಡಪ್ಪ, ಹೇಮಂತರಾಜ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಆರ್ಯವೈಶ್ಯ ಮಂಡಳಿಯಿಂದ ಕಡೆ ಕಾರ್ತಿಕೋತ್ಸವ



» ಹಿರಿಯೂರು

ಜನರು ಉತ್ತಮ ಜೀವನ ನಡೆಸಲು, ಸಕಲ ಜೀವರಾಶಿಗಳ ಸಂರಕ್ಷಿಸಲು, ಲೋಕಕಲ್ಯಾಣಕ್ಕಾಗಿ, ತಾಯಿ ವಾಸವಿಯ ಕೃಪೆಗಾಗಿ ಕಾರ್ತಿಕಮಾಸ 30 ದಿನಗಳು ದೀಪೋತ್ಸವವನ್ನು ನಡೆಸಿ, ಕಡೇ ಕಾರ್ತಿಕ ದೀಪೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ ಎಂಬುದಾಗಿ ಆರ್ಯವೈಶ್ಯಮಂಡಳಿ ಅಧ್ಯಕ್ಷರಾದ ಹೆಚ್. ಎಸ್.ನಾಗರಾಜ್ ಗುಪ್ತ ಹೇಳಿದರು.ನಗರದ ವಾಸವಿ ದೇವಸ್ಥಾನದಲ್ಲಿ ಆರ್ಯವೈಶ್ಯಮಂಡಳಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ವಿಜೃಂಭಣೆಯ ಕಡೆ ಕಾರ್ತಿಕೋತ್ಸವದ ದಿನದ ಕಾರ್ಯಕ್ರಮದಲ್ಲಿ ಆರ್ಯವೈಶ್ಯಮಂಡಳಿ ಮತ್ತು ಅಂಗಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಆರ್ಯವೈಶ್ಯ ಕುಲಭಾಂದವರ ಸಮ್ಮುಖದಲ್ಲಿ ಮೊದಲ ದೀಪ ಬೆಳಗಿಸಿ, ನಂತರ ಅವರು ಮಾತನಾಡಿದರು.

ಪ್ರತಿದಿನ ದೇವಸ್ಥಾನದ ಆವರಣದಲ್ಲಿ ಮಹಿಳೆಯರಿಂದ ರಂಗೋಲಿಗಳು ಬಿಡಿಸುವುದು, ವಾಸವಿಗೆ ಪುಷ್ಪಾಲಂಕಾರ ಭಜನಾಮಂಡಳಿಗಳಿಂದ ಭಜನೆ ಕಾರ್ತಿಕೋತ್ಸವ ದೀಪಗಳು ಬೆಳಗಿಸಿ ತಾಯಿ ವಾಸವಿಗೆ ಆರತಿಪೂಜೆ ತೀರ್ಥಪ್ರಸಾದ ವಿನಿಯೋಗ, ಹೀಗೆ ಪ್ರತಿದಿನ ನಿಮ್ಮೆಲ್ಲರ ಸಹಕಾರದಲ್ಲಿ ನಡೆಸಿ, ಕೊನೆಯದಿನ ವಿಜೃಂಭಣೆಯ ಕಾರ್ತಿಕೋತ್ಸವ ಆಚರಿಸಲಾಗುತ್ತಿದೆ ಎಂದರು.

ಕಾರ್ಯದರ್ಶಿ ಪಿ.ವಿ.ನಾಗರಾಜ್ ಮಾತನಾಡಿ, ಪ್ರತಿದಿನ ಸುಗಮವಾಗಿ ಕಾರ್ಯಕ್ರಮಗಳನ್ನು ನಡೆಸಿಕೊಟ್ಟ ಪ್ರತಿಯೊಬ್ಬರಿಗೂ ಅಭಿನಂದನೆಗಳನ್ನು ತಿಳಿಸಿದರಲ್ಲದೆ, ಪ್ರತಿಯೊಬ್ಬರ ರಕ್ಷಣೆ ಮಾಡುವಂತೆ ತಾಯಿವಾಸವಿಯನ್ನುಪ್ರಾರ್ಥಿಸೋಣ ಎಂಬುದಾಗಿ ಹೇಳಿದರು.ಇದೇ ಸಂದರ್ಭದಲ್ಲಿ ಕಾರ್ತೀಕ ಮಾಸದಲ್ಲಿ ಉತ್ತಮವಾದ ರಂಗೋಲಿಗಳನ್ನು ಬಿಡಿಸಿದವರಿಗೆ ಬಹುಮಾನಗಳನ್ನು ನೀಡಲಾಯಿತು.ಈ ಕಾರ್ಯಕ್ರಮದಲ್ಲಿ ಆರ್ಯ ವೈಶ್ಯ ಮಂಡಳಿ ಗೌರವ ಅಧ್ಯಕ್ಷರಾದ ಕೆ.ಆರ್. ವೆಂಕಟೇಶ್, ಉಪಾಧ್ಯಕ್ಷರಾದ ಕೆ.ವಿ.ಅಮರೇಶ್, ಪಿ.ಎಲ್.ಪುರುಷೋತ್ತಮ್, ಎಸ್.ಮಂಜುನಾಥ್, ಆರ್.ಪ್ರಕಾಶ್ ಕುಮಾರ್, ಎಲ್.ಆನಂದಶೆಟ್ಟಿ, ಚಂದ್ರಯ್ಯಶೆಟ್ಟಿ, ರವೀಂದ್ರನಾಥ್ ಶೆಟ್ಟಿ, ದೇವರಾಜಮೂರ್ತಿ, ಪಿ.ಆರ್.ಸತೀಶ್ ಬಾಬು, ರಾಜ್ ಕುಮಾರ್, ವೇಣು, ಚಂದ್ರಶೇಖರ್, ವೆಂಕಟಾಚಲಶೆಟ್ಟಿ, ಜನಾರ್ಧನಶೆಟ್ಟಿ, ಅನಂತ್ ಕುಮಾರ್, ಇ.ಆರ್.ರಮೇಶ್ ಬಾಬು, ಕೆ.ಎಸ್. ಮಂಜುನಾಥ್, ಎಸ್.ಹೆಚ್.ಶ್ರೀಧರ್, ಮಹೇಶ್, ಶ್ರೀನಿವಾಸ್ ಬಾಬು, ಆರ್ಯವೈಶ್ಯ ಮಂಡಳಿ ಅಂಗಸಂಸ್ಥೆಗಳ ಎಲ್ಲಾ ಪಧಾಧಿಕಾರಿಗಳು, ಆರ್ಯವೈಶ್ಯ ಕುಲಭಾಂದವರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿದರು. ಕೊನೆಯಲ್ಲಿ ಅನ್ನಸಂತರ್ಪಣೆ ನಡೆಸಲಾಯಿತು.

### ವಿಕಸಿತ ಯಾತ್ರೆ ಕೇಂದ್ರದ ಯೋಜನೆಗಳನ್ನು ಜನರ ಮನೆಗೆ ತಲುಪಿಸುವ ಕಾರ್ಯ ಮಾಡುತ್ತಿದೆ




» ಹಿರಿಯೂರು

ಕೇಂದ್ರ ಸರ್ಕಾರದ ಪ್ರಧಾನಿ ನರೇಂದ್ರ ಮೋದಿಯವರ ಯೋಜನೆಗಳನ್ನು ಬಡವರ ಮನೆ ಬಾಗಿಲಿಗೆ ತಲುಪಿಸುವ ಜನಪರ ಕಾರ್ಯಕ್ರಮ ಇದಾಗಿದ್ದು, ದೇಶದ ಎಲ್ಲಾ ನಾಗರೀಕರಿಗೂ ಈ ವಿಕಸಿತ ಭಾರತ ಸಂಕಲ್ಪ ಯಾತ್ರೆ ಮಹತ್ವವನ್ನು ಜನರಿಗೆ ತಿಳಿಸುವುದೇ ಈ ಕಾರ್ಯಕ್ರಮದ ಮೂಲಉದ್ದೇಶವಾಗಿದೆ ಎಂಬುದಾಗಿ ಆರ್ಥಿಕ ಸಾಕ್ಷರತಾ ಸಂಯೋಜಕರಾದ ಎಸ್. ಕೆ.ಮಧುಸೂದನ್ ಹೇಳಿದರು.ತಾಲ್ಲೂಕಿನ ಗೋಪನಹಳ್ಳಿಗ್ರಾಮ ಸೇರಿದಂತೆ ವಿವಿಧಗ್ರಾಮಗಳಲ್ಲಿ ವಿಕಸಿತ ಭಾರತ ಸಂಕಲ್ಪ ಯಾತ್ರೆ ಅಂಗವಾಗಿ ದೇಶದ ರಾಷ್ಟ್ರೀಕೃತ ಬ್ಯಾಂಕುಗಳು ಹಾಗೂ ಇತರೆ ಬ್ಯಾಂಕುಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ "ಜನಜಾಗೃತಿ" ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.ಇದೇ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಭಾಷಣವನ್ನು ಸಾರ್ವಜನಿಕರಿಗೆ ವೀಕ್ಷಣೆ ಮಾಡಲು ಅನುವು ಮಾಡಿಕೊಡಲಾಯಿತು. ಇದೇ ವೇಳೆ ಗ್ರಾಮಸ್ಥರಿಗೆ ಪ್ರತಿಜ್ಞಾವಿಧಿಯನ್ನು ಬೋಧಿಸಲಾಯಿತು. ಕೇಂದ್ರ ಸರ್ಕಾರದ ನಾನಾ ಯೋಜನೆಗಳ ಅರ್ಹ ಫಲಾನುಭವಿಗಳಿಗೆ ಸಾಂಕೇತಿಕವಾಗಿ ಆದೇಶ ಪ್ರತಿಪತ್ರಗಳನ್ನು ವಿತರಿಸಲಾಯಿತು.

### ಬೆಣ್ಣೆದೋಸೆಗಳನ್ನು ನೀಡಲು ಜಿಲ್ಲಾಧಿಕಾರಿ ಸೂಚನೆ

# ದೋಸೋತ್ಸವದಲ್ಲಿ ಗ್ರಾಹಕರಿಗೆ ಗುಣಮಟ್ಟದ

» ದಾವಣಗೆರೆ

ಅಂತರಾಷ್ಟ್ರೀಯ ಮಟ್ಟದಲ್ಲಿ ದಾವಣಗೆರೆ ಬೆಣ್ಣೆದೋಸೆಯನ್ನು ಜನಪ್ರಿಯಗೊಳಿಸುವ ಉದ್ದೇಶದಿಂದ ಡಿ.23, 24 ಮತ್ತು 25 ರಂದು ದೋಸೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು ಗ್ರಾಹಕರಿಗೆ ಉತ್ತಮ ಗುಣಮಟ್ಟದ ಬೆಣ್ಣೆದೋಸೆಯನ್ನು ನೀಡಲು ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ ಬೆಣ್ಣೆ ದೋಸೆ ಹೋಟೇಲ್ ಮಾಲೀಕರಿಗೆ ಸೂಚಿಸಿದರು.ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ದೋಸೋತ್ಸವದ ಕುರಿತಂತೆ ಬೆಣ್ಣೆ ದೋಸೆ ಹೋಟೆಲ್ ಮಾಲೀಕರೊಂದಿಗೆ ನಡೆಸಿದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತಾನಾಡಿದರು

ದಾವಣಗೆರೆ ಬೆಣ್ಣೆದೋಸೆಗೆ ಬ್ರಾಂಡಿಂಗ್ ನೀಡುವ ಉದ್ದೇಶದಿಂದ ಡಿ.23, 24 ಮತ್ತು 25 ರಂದು ನಗರದ ಬಾಪೂಜಿ ಎಂಬಿಎ ಮೈದಾನ ಮತ್ತು ಗ್ಲಾಸ್‌ಹೌಸ್ ಮುಂಭಾಗದಲ್ಲಿ ದೋಸೋತ್ಸವವನ್ನು ಹಮ್ಮಿಕೊಳ್ಳಲಾಗಿದೆ ಬೆಳಿಗ್ಗೆ 8 ರಿಂದ ದೋಸೋತ್ಸವ ಪ್ರಾರಂಭವಾಗಲಿದ್ದು, ಒಂದು ಬೆಣ್ಣೆ ದೋಸೆಗೆ ರೂ.60/– ಹಾಗೂ 1 ಪ್ಲೇಟ್ ಖಾಲಿ ದೋಸೆಗೆ ರೂ.60/– ಗಳನ್ನು ನಿಗಧಿಪಡಿಸಲಾಗಿದೆ.



ದೋಸೆಅಂಗಡಿಮಾಲೀಕರುಕಾರ್ಯಕ್ರಮದಲ್ಲಿ ಯಾವುದೇ ಒತ್ತಡಕ್ಕೆ ಒಳಗಾಗದೇ ಸುಲಭ ವಿಧಾನ ಅನುಸರಿಸಬೇಕು. ಹಾಗೂ ಟೋಕನ್ ವ್ಯವಸ್ಥೆ ಮಾಡಿಕೊಳ್ಳಬೇಕು. ಡಿ.23, 24 ರಂದು ವೀರಶೈವ ಅಧೀವೇಶನವಿರುವುದರಿಂದ ಜನಸಂದಣೆ ಹೆಚ್ಚಾಗಿರುವುದರಿಂದ ಗ್ರಾಹಕರಿಗೆ ಅರೆಬರೆ ಬೇಯಿಸಿದ ದೋಸೆಗಳನ್ನು ನೀಡದೇ ಉತ್ತಮ ಗುಣಮಟ್ಟದ ಬೆಣ್ಣೆದೋಸೆಗಳನ್ನು ನೀಡಬೇಕು. ದೋಸೆ ಸ್ಟಾಲ್‌ಗಳಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಕಸದ ಡಬ್ಬಿಗಳ ವ್ಯವಸ್ಥೆ ಹಾಗೂ ಶುಚಿತ್ವವನ್ನು ಕಾಪಾಡಿಕೊಳ್ಳಬೇಕೆಂದರು. ಹೋಟೆಲ್ ಮಾಲೀಕರು ತ್ಯಾಜ್ಯ ಪದಾರ್ಥಗಳನ್ನು ಆಗಿಂದಾಗ್ಗೆ ವಿಲೇವಾರಿ ಮಾಡಬೇಕು. ದೋಸೆ ತಯಾರಿಕೆಯಲ್ಲಿ ರಾಸಾಯನಿಕಗಳನ್ನು ಬಳಸಬಾರದು. ಸಂಬಂಧಿಸಿದ ಅಧಿಕಾರಿಗಳು ದೋಸೆಯ ಗುಣಮಟ್ಟ, ದೋಸೆಯ ರುಚಿ ತಪಸಾಣೆ ಸ್ಟಾಲ್ ಗಳ ವ್ಯವಸ್ಥೆಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಬೇಕು.

ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಉಪವಿಭಾಗಾಧಿಕಾರಿ ದುರ್ಗಾಶ್ರೀ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕ ಸಿದ್ದರಾಮ ಮರಿಹಾಳ್, ದಾವಣಗೆರೆ ತಾಲ್ಲೂಕು ತಹಶೀಲ್ದಾರ್ ಡಾ.ಎಂ.ಬಿ ಅಶ್ವಥ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಸ್ ಷಣ್ಮುಖಪ್ಪ, ಪಾಲಿಕೆ ಆಯುಕ್ತೆ ರೇಣುಕಾ ಹಾಗೂ ಹೋಟೆಲ್ ಮಾಲೀಕರು ಉಪಸ್ಥಿತರಿದ್ದರು.

### ಸರ್ಕಾರಿ ಕಚೇರಿಗಳಲ್ಲಿ ಪಾರದರ್ಶಕವಾಗಿ ಕಾರ್ಯನಿರ್ವಹಿಸಲು ಸೂಚನೆ




» ದಾವಣಗೆರೆ

ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿಗಳು ಉತ್ತಮ ಹಾಗೂ ಪಾರದರ್ಶಕವಾಗಿ ಕಾರ್ಯ ನಿರ್ವಹಿಸುವುದರ ಜೊತೆಗೆ ಸಾರ್ವಜನಿಕರ ಸ್ನೇಹ ಪರವಾಗಿ ಕೆಲಸ ಮಾಡಬೇಕೆಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂವಿ ತಿಳಿಸಿದರು. ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಜರುಗಿದ ಮಾಹಿತಿ ಹಕ್ಕು ಅಧಿನಿಯಮ 2005ರ ಕುರಿತ ಕಾರ್ಯಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ದೇಶದಲ್ಲಿ ಮಾಹಿತಿ ಹಕ್ಕು 2005 ರಲ್ಲಿ ಹೊಸ ಕ್ರಾಂತಿಯೇ ಶುರುಮಾಡಿದ್ದು, ಇದರ ಮೂಲ ಉದ್ದೇಶ ಮಾಹಿತಿ ಹಕ್ಕಿನ ಕಾಯ್ದೆಗಳನ್ನು ಜಾರಿಗೆ ತಂದು ಸರ್ಕಾರಿ ಕಚೇರಿಗಳ ಆಡಳಿತದಲ್ಲಿ ಪಾರದರ್ಶಕತೆಯನ್ನು ಕಾಪಾಡಿಕೊಳ್ಳುವುದಾಗಿದೆ. ಯಾವುದೇ ಅಧಿಕಾರಿ, ಆರ್‌ಟಿಐ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಕಚೇರಿಗಳಿಗೆ ಬಂದು ಸಂಪೂರ್ಣ ಮಾಹಿತಿ ಕೇಳುವ ಮತ್ತು ಪಡೆದುಕೊಳ್ಳುವಂತಹ ಹಕ್ಕಿದೆ. ಆರ್.ಟಿ.ಐ ಕಾರ್ಯಕರ್ತರು ಸರ್ಕಾರಿ ಕಚೇರಿಗಳಿಗೆ ಮಾಹಿತಿ ಪಡೆಯಲು ಬಂದಾಗ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಯಾವುದೇ ಆತಂಕಕ್ಕೆ ಒಳಗಾಗದೆ ಇಲಾಖಾವಾರು ಸಮರ್ಪಕ ಮಾಹಿತಿಯನ್ನು ಒದಗಿಸಬೇಕು. ಕ್ರಮಬದ್ಧವಾಗಿ ತಮ್ಮ ಕಚೇರಿಗಳಲ್ಲಿ ಮಾಹಿತಿಯ ದಾಖಲೆಗಳನ್ನು ನಿರ್ವಹಿಸಬೇಕು.

ಅಧಿಕಾರಿಗಳು ತಮ್ಮ ಕಚೇರಿಗಳಲ್ಲಿ 4.1ಎ ನಲ್ಲಿ ಕ್ರಮಬದ್ಧವಾಗಿ ಯಾವ ದಾಖಲೆಗಳನ್ನು ಸಾರ್ವಜನಿಕರಿಗೆ ಒದಗಿಸಲು ಅವಕಾಶವಿರುತ್ತದೆ ಎಂಬುದನ್ನು ತಿಳಿದುಕೊಂಡು ಮಾಹಿತಿ ನೀಡಬೇಕಾಗುತ್ತದೆ ಎಂದರು.

### ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ

ಚಿತ್ರದುರ್ಗ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ (ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳಿಂದ ಪ್ರಸಕ್ತ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳು https//shp.karnataka.gov.in ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು.

## ಪ್ರಮುಖ ಸುದ್ದಿ

# ತುರುವನೂರು ಗ್ರಾಮದಲ್ಲಿ ವಿಶಾಲವಾದ ರಸ್ತೆ ನಿರ್ಮಾಣ

» ಚಿತ್ರದುರ್ಗ

ತುರುವನೂರು ಹೋಬಳಿ ಕೇಂದ್ರದಲ್ಲಿ ನಡೆಯುತ್ತಿರುವ ರಸ್ತೆ ಅಗಲೀಕರಣ ಕಾಮಗಾರಿಯನ್ನು ಗುಣಮಟ್ಟ ಮತ್ತು ಸುಂದರವಾಗಿ ಮಾಡಬೇಕು ಎಂದು ಶಾಸಕ ಟಿ.ರಘುಮೂರ್ತಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ತಾಲೂಕಿನ ತುರುವನೂರು ಗ್ರಾಮದಲ್ಲಿ ನಡೆಯುತ್ತಿರುವ ಮುಖ್ಯ ರಸ್ತೆ ಅಗಲೀಕರಣ ಸ್ಥಳಕ್ಕೆ ಶನಿವಾರ ಸಂಜೆ ಭೇಟಿ ನೀಡಿ ಕಾಮಗಾರಿಯನ್ನು ವೀಕ್ಷಿಸಿ ನಂತರ ಅಧಿಕಾರಿಗಳ ಜೊತೆ ಸಭೆ ನಡೆಸಿ ಮಾತನಾಡಿದರು.

ತುರುವನೂರು ಗ್ರಾಮ ಹೋಬಳಿ ಕೇಂದ್ರವಾಗಿದ್ದು ದಿನದಿಂದ ದಿನಕ್ಕೆ ವಿಸ್ತರಗೊಳ್ಳುತ್ತಿದೆ. ಜನಸಂಖ್ಯೆ ವ್ಯಾಪಾರ ವಹಿವಾಟು ಸಹ ಹೆಚ್ಚುತ್ತಿದ್ದು ರಸ್ತೆ ಅಗಲೀಕರಣ ಮಾಡಿದರೆ ಹೋಬಳಿ ಕೇಂದ್ರ ಸುಂದರವಾಗಿ ಮತ್ತು ನಾಗರಿಕರಿಗೆ ಹೆಚ್ಚು ಅನುಕೂಲವಾಗುತ್ತದೆ ಎಂದರು.



ರಸ್ತೆ ಅಗಲೀಕರಣದಲ್ಲಿ ಚರಂಡಿ, ಪುಟ್ಬಾತ್, ಅಲಂಕಾರಿಕ ಬೀದಿ ದೀಪಗಳನ್ನು ಅಳವಡಿಸಲಾಗುತ್ತದೆ. ಇದರಿಂದ ಹೊಸ ರೂಪ ಬರುತ್ತದೆ. ಕಾಮಗಾರಿಯನ್ನು ಅಧಿಕಾರಿಗಳು ಅಚ್ಚುಕಟ್ಟಾಗಿ ನಿರ್ವಹಣೆ ಮಾಡಬೇಕು. ಕಾಮಗಾರಿಯಲ್ಲಿ ಯಾವುದೇ ರಾಜೀ ಇಲ್ಲ. ಜನರು ಸಹ ಅವರು ಎಲ್ಲಾವನ್ನು ಗಮನ ಹರಿಸಬೇಕು.

ಎಲ್ಲಾ ಅಧಿಕಾರಿಗಳ ಜೊತೆ ಸಭೆ ನಡೆಸಿ ಸೂಚನೆ ನೀಡಿದ್ದು ಸಾರ್ವಜನಿಕರ ಕೆಲಸವನ್ನು ಎಲ್ಲಾ ಅಧಿಕಾರಿಗಳು ಕಾಲಮಿತಿಯೊಳಗೆ ಮಾಡಲು ಹೇಳಿದ್ದೇನೆ. ಸಾರ್ವಜನಿಕ ದೂರುಗಳು ಕೇಳಿ ಬಂದರೆ ಸಹಿಸುವುದಿಲ್ಲ. ಗ್ರಾಮ ಪಂಚಾಯತಿ ಪಿಡಿಓ ಮತ್ತು ಸಿಬ್ಬಂದಿಗಳು ಉತ್ತಮ ಗ್ರಾಮದ ಸ್ವಚ್ಚತೆಯನ್ನು ನಿರ್ವಹಣೆ ಮಾಡಬೇಕು. ಇ.ಸ್ವತ್ತು ಇಂದಿಷ್ಟು ದಿನದಲ್ಲಿ ನೀಡಲು ಅವಕಾಶ ಇದ್ದು ಸುಮ್ಮನೆ ಜನರನ್ನು ಅಲೆದಾಡಿಸಬೇಡಿ ಎಂದು ಖಡಕ್ ಆಗಿ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ನಾಗವೇಣಿ, ಪಿ.ಡಿ.ಓ. ಖಲೀಂ, ಕಾರ್ಯನಿರ್ವಾಹಕ ಇಂಜಿನಿಯರ್ ಮಲ್ಲಿಕಾರ್ಜುನ್, ನೀರಾವರಿ ಇಲಾಖೆ ಇಂಜಿನಿಯರ್ ಅಣ್ಣಪ್ಪ, ಗ್ರಾಮ ನೈರ್ಮಲ್ಯ ಇಂಜಿನಿಯರ್ ಬಸವನಗೌಡ, ಪಿರ್ಡಿ ಇಂಜಿನಿಯರ್ ಪಾತಪ್ಪ, ಪಿ.ಡಬ್ಲ್ಯೂ.ಡಿ. ಇಂಜಿನಿಯರ್ ಮಂಜುನಾಥ್, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು, ಮುಖಂಡರು, ಕಾರ್ಯಕರ್ತರು ಸಾರ್ವಜನಿಕರು ಹಾಗೂ ಎಲ್ಲಾ ಅಧಿಕಾರಿಗಳು ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T